ನಮ್ಮ ಜನ
NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 42 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 27–08–2024 ಮಂಗಳವಾರ | ಪುಟ: 4 | ಬೆಲೆ : ರೂ.2–00
Volume - 02 Issue - 42 | Title- Code: KARKAN 28269 | Chitradurga | Date: 27-08-2024 Tuesday | Page: 4 | Price: Rs. 2-00

ಒಳಪುಟದ ಸುದ್ದಿಗಳು
ಸ್ತ್ರೀ ಕುಲದ ಮೇಲೆ ದಾಳಿ ಮಾಡುವವರಿಗೆ ಕಠೋರ ಶಿಕ್ಷೆಯಾಗಲಿ: ಸ್ವಾಮೀಜಿ 2
ಉತ್ತಮ ಆಟಪ್ರದರ್ಶಿಸುವ ಮೂಲಕ ಕ್ರೀಡಾ ಕ್ಷೇತ್ರದ ಗೌರವವನ್ನು ಉಳಿಸಿ: ಶಾಸಕ 3
ರಂಗಮಂದಿರ ಪೂರ್ಣಗೊಳಿಸಲು ಅನುದಾನ ನೀಡಲು ಕ್ರಮ 4

ಸುದ್ದಿ, ಜಾಹಿರಾತಿಗೆ 9686622252

### ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

# ಎದ್ದೇಳು ಜನಸೇವಕ ಹೋರಾಟ

## ನೀರಾವರಿ ಅನುಷ್ಠಾನ ಹೋರಾಟ ಸಮಿತಿಯಿಂದ: ಸಚಿವರು, ಶಾಸಕರ ಮುಂದೆ ತಮಟೆ ಚಳವಳಿ





» ಚಿತ್ರದುರ್ಗ

ಭದ್ರಾ ಮೇಲ್ದಂಡೆಗೆ ಯೋಜನೆಗೆ ಅನುದಾನ ಬಿಡುಗಡೆ ಮಾಡಿ ಶೀಘ್ರ ಕಾಮಗಾರಿ ಪೂರ್ಣಗೊಳಿಸುವ ಸಂಬಂಧ ಜಿಲ್ಲಾ ನೀರಾವರಿ ಅನುಷ್ಠಾನ ಹೋರಾಟ ಸಮಿತಿ ಜನಪ್ರತಿನಿಧಿಗಳ ಎಚ್ಚರಿಸಲು ಎದ್ದೇಳು ಜನ ಸೇವಕ ಹೋರಾಟ ಹಮ್ಮಿಕೊಂಡಿದೆ.

ನಗರದ ಪ್ರವಾಸಿ ಮಂದಿರದಲ್ಲಿ ರೈತ ಮುಖಂಡ ಬೇಡರೆಡ್ಡಿ ಹಳ್ಳಿ ಬಸವರೆಡ್ಡಿ ಅಧ್ಯಕ್ಷತೆಯಲ್ಲಿ ಸೋಮವಾರ ನಡೆದ ಸಮಿತಿ ಸಭೆಯಲ್ಲಿ ಈ ನಿರ್ಣಯ ಕೈಗೊಳ್ಳಲಾಯಿತು.ಭದ್ರಾ ಕಾಮಗಾರಿಗೆ ಅನುದಾನ ನೀಡುಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ದ್ರೋಹವೆಸಗುತ್ತಿವೆ. ಜಿಲ್ಲೆಯ ಜನ ಪ್ರತಿನಿಧಿಗಳು ಎಚ್ಚರ ತಪ್ಪಿ ಮಲಗಿದ್ದು ಅವರನ್ನು ಏಳಿಸುವ ಸಂಬಂಧ ಎದ್ದೇಳು ಜನ ಸೇವಕ ಹೋರಾಟ ಹಮ್ಮಿಕೊಳ್ಳಬೇಕು. ಸಂಸದ ಸೇರಿದಂತೆ ಜಿಲ್ಲೆಯ ಎಲ್ಲ ಶಾಸಕರ ಮನೆ ಮುಂಭಾಗ ತಮಟೆ ಬಾರಿಸುವುದರ ಮೂಲಕ ಎಚ್ಚರಿಸುವ ಕೆಲಸ ಮಾಡಬೇಕೆಂದು ಸಭೆ ಅಭಿಪ್ರಾಯಪಟ್ಟಿತು.

￼￼￼ದೇಳು ಜನ ಸೇವಕ ಕಾರ್ಯಕ್ರಮದ ಆರಂಭದಲ್ಲಿ ಆಗಸ್ಟ್ 29 ರ ಗುರುವಾರ ಸಂಸದ ಗೋವಿಂದ ಕಾರಜೋಳ ಮನೆ ಮುಂಭಾಗ ತಮಟೆ ಬಾರಿಸಲು ಸಭೆ ತೀರ್ಮಾನಿಸಿತು. ನಂತರ ಎಲ್ಲ ಶಾಸಕರ ಮನೆ ಮುಂಭಾಗ ಒಂದೊಂದು ದಿನ ಹಾಗೂ ಅಂತಿಮವಾಗಿ ಜಿಲ್ಲಾ ಉಸ್ತುವಾರಿ ಸಚಿವರ ಮನೆ ಮುಂದೆ ಕಾರ್ಯಕ್ರಮ ನಡೆಯಲಿದೆ.

ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದ ಸರ್ವೋದಯ ಕರ್ನಾಟಕದ ಮುಖಂಡ ಜೆ.ಯಾದವರೆಡ್ಡಿ, ಕಾಮಗಾರಿ ಭದ್ರಾ ಮೇಲ್ದಂಡೆಗೆ ಅನುದಾನ ನೀಡುವಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ನಿರ್ಲಕ್ಷ್ಯ ತಾಳಿವೆ. ಬಾಕಿ ಬಿಲ್ ಪಾವತಿಸದ ಕಾರಣ ಕಾಮಗಾರಿ ನಿರ್ವಹಿಸುತ್ತಿದ್ದ ಆದಿತ್ಯ ಕನ್ ಸ್ಟ್ರಕ್ಷನ್ ಕಂಪನಿ ಹಾಗೂ ಅಮೃತ ಕನ್ ಸ್ಟ್ರಕ್ಷನ್ ಕಂಪನಿಗಳು ಭದ್ರಾ ಮೇಲ್ದಂಡೆ ಮೇಲ್ದಂಡೆ ಮುಖ್ಯ ಇಂಜಿನಿಯರ್ ಪತ್ರ ಬರೆದು ಕಾಮಗಾರಿ ಸ್ಥಗಿತಗೊಳಿಸಿ ವಾಪಾಸ್ಸು ಹೋಗುತ್ತಿದ್ದೇವೆ. ನಮ್ಮ ಬಿಲ್ ಸೆಟ್ಲ್ ಮೆಂಟ್ ಮಾಡುವಂತೆ ಮನವಿ ಮಾಡಿವೆ.

ಈ ಎರಡೂ ಕಂಪನಿಗಳಿಗೆ ಬರೋಬ್ಬರಿ ಐದು ನೂರು ಕೋಟಿಗೂ ಹೆಚ್ಚು ಹಣ ಪಾವತಿ ಮಾಡಬೇಕಿದೆ.ಈ ಕಂಪಿನಿಗಳು ಫೀಲ್ಡ್ ನಿಂದ ಕಾಲ್ಕಿತ್ತರೆ ಮರಳಿ ಕರೆದುಕೊಂಡು ಬರುವುದು ಕಷ್ಟ. ರಾಜ್ಯ ಸರ್ಕಾರ ಕೂಡಲೇ ಈ ಕಂಪನಿಗಳು ಹೊರ ಹೋಗದಂತೆ ತಡೆಯಬೇಕು. ಸೂಕ್ತ ಅನುದಾನ ಬಿಡುಗಡೆ ಮಾಡಬೇಕೆಂದು ಯಾದವರೆಡ್ಡಿ ಆಗ್ರಹಿಸಿದರು.

ಭದ್ರಾ ಮೇಲ್ದಂಡೆಗೆ 2007–08 ರಲ್ಲಿ ಆರಂಭವಾಗಿದ್ದು ಇದುವರೆಗೂ 9700 ರು ಕೋಟಿ ರು ಗಳನ್ನು ರಾಜ್ಯ ಸರ್ಕಾರ ವ್ಯಯ ಮಾಡಿದೆ.

ಆದರೆ 2014 ರಲ್ಲಿ ಶುರುವಾದ ಎತ್ತಿನಹೊಳೆ ಯೋಜನೆಗೆ 15900 ಕೋಟಿ ರು ವ್ಯಯಿಸಲಾಗಿದೆ. ಎತ್ತಿನ ಹೊಳೆ ಯೋಜನೆ ಪೂರ್ಣಗೊಳಿಸುವುದರ ಹಿಂದೆ ಇರುವ ರಾಜಕೀಯ ಇಚ್ಛಾಶಕ್ತಿ , ಭದ್ರಾ ಮೇಲ್ದಂಡೆಗೆ ಇಲ್ಲದಂತಾಗಿದೆ. ಇಲ್ಲಿನ ಜನ ಪ್ರತಿನಿಧಿಗಳ ನಿಸ್ಸೀಮ ನಿರ್ಲಕ್ಷ್ಯತನ, ರಾಜ್ಯ ಸರ್ಕಾರದ ಉದಾಸೀನ ಮನೋಭಾವದಿಂದಾಗಿ ಯೋಜನೆಗೆ ತೀವ್ರ ಹಿನ್ನಡೆಯಾಗಿದೆ. ಜಿಲ್ಲೆಯ ಜನ ದಂಗೆ ಏಳುವ ಮುನ್ನ ಸರ್ಕಾರಗಳು ಎಚ್ಚೆತ್ತುಕೊಳ್ಳಬೇಕೆಂದರು.

ಬೇಡರೆಡ್ಡಿ ಬಸವರೆಡ್ಡಿ ಮಾತನಾಡಿ, ಕಾಮಗಾರಿ ನಿರ್ವಹಣೆ ಮಾಡುವ ಕಂಪನಿಗಳು ಯಾವುದೇ ಕಾರಣದಿಂದ ಹೊರ ಹೋಗದಂತೆ ತಡೆವ ಕೆಲಸವಾಗಬೇಕು. ಸರ್ಕಾರ ಈ ಸಬೂಬು ಹೇಳಿ ಮತ್ತೊಂದಿಷ್ಟು ದಿನ ಕಾಲ ನೂಕುವ ಅಪಾಯವಿದೆ. ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ತಕ್ಷಣವೇ ಜಲ ಸಂಪನ್ಮೂಲ ಸಚಿವ ಡಿ.ಕೆ.ಶಿವಕುಮಾರ್ ಬಳಿ ಮಾತನಾಡಿ, ಕಂಪನಿಗಳು ಹೊರ ಹೋಗದಂತೆ ನೋಡಿಕೊಳ್ಳಬೇಕು. ಹಾಗೊಂದು ವೇಳೆ ಕಂಪನಿಗಳು ಇಲ್ಲಿಂದ ಕಾಲ್ಕಿತ್ತಲ್ಲಿ ಮತ್ತೆ ಹೊಸದಾಗಿ ಟೆಂಡರ್ ಕರೆದ ಏಜೆನ್ಸಿ ಫಿಕ್ಸ್ ಮಾಡುವಲ್ಲಿ ಮತ್ತಷ್ಟು ವಿಳಂಬವಾಗುತ್ತದೆ. ಅರ್ಧಕ್ಕೆ ನಿಂತ ಕಾಮಗಾರಿ ಮುಂದುವರಿಸಲು ಯಾರೂ ಬರುವುದಿಲ್ಲವೆಂಬ ಕನಿಷ್ಟ ಪ್ರಜ್ಞೆ ಸರ್ಕಾರಕ್ಕೆ ಇರಬೇಕು ಎಂದರು.

ಸಿಪಿಐ ಜಿಲ್ಲಾ ಕಾರ್ಯದರ್ಶಿ ಜಿ.ಸಿ.ಸುರೇಶ್ ಬಾಬು ಮಾತನಾಡಿ, ಒಂದು ತಿಂಗಳ ಒಳಗಾಗಿ ರಾಜ್ಯ ಸರ್ಕಾರ ಭದ್ರಾ ಮೇಲ್ದಂಡೆಗೆ ಅನುದಾನ ನೀಡಬೇಕು. ಕೇಂದ್ರ ಕೂಡಾ ತನ್ನ ವಚನ ಪಾಲಿಸಬೇಕು. ಅಗತ್ಯ ಬಂದಲ್ಲಿ ಕೇಂದ್ರ ಸಚಿವ ವಿ.ಸೋಮಣ್ಣಹಾಗೂ ಹಣಕಾಸು ಸಚಿವ ನಿರ್ಮಲಾ ಸೀತರಾಮನ್ ಮನೆ ಮುಂಭಾಗ ಪ್ರತಿಭಟನೆ ನಡೆಸೋಣ ಎಂದರು.

ನೀರಾವರಿ ಅನುಷ್ಠಾನ ಹೋರಾಟ ಸಮಿತಿ ಪ್ರಧಾನ ಕಾರ್ಯದರ್ಶಿ ಕೆ.ಆರ್.ದಯಾನಂದ, ಸಂಚಾಲಕ ಚಿಕ್ಕಪ್ಪನಹಳ್ಳಿ ಷಣ್ಮುಖ, ಕರುನಾಡ ಸೇನೆ ಜಿಲ್ಲಾಧ್ಯಕ್ಷ ಶಿವಕುಮಾರ್, ರೈತ ಸಂಘದ ಜಿಲ್ಲಾಧ್ಯಕ್ಷ ಹಂಪಯ್ಯನಮಾಳಿಗೆ ಧನಂಜಯ, ಮಾಜಿ ಅಧ್ಯಕ್ಷ ಬಸ್ತಿಹಳ್ಳಿ ಸುರೇಶ್ ಬಾಬು, ಕಾರ್ಯಾಧ್ಯಕ್ಷ ಹೊರಕೇರಪ್ಪ, ರಾಜ್ಯ ಉಪಾಧ್ಯಕ್ಷ ಕೆ.ಪಿ.ಭೂತಯ್ಯ, ಜಿಲ್ಲಾ ಗೌರವಾಧ್ಯಕ್ಷ ಮಲ್ಲಾಪುರ ತಿಪ್ಪೇಸ್ವಾಮಿ, ಉಪಾಧ್ಯಕ್ಷ ಚಿಕ್ಕಪ್ಪನಹಳ್ಳಿ ರುದ್ರಸ್ವಾಮಿ, ಜಿಲ್ಲಾ ಮಹಿಳಾ ಅಧ್ಯಕ್ಷ ದೊಡ್ಡಸಿದ್ದವ್ವನಹಳ್ಳಿ ಸುಧಾ, ಹಿರಿಯೂರು ತಾಲೂಕು ಅಧ್ಯಕ್ಷ ಬ್ಯಾಡರಹಳ್ಳಿ ಶಿವಕುಮಾರ್, ಚೇತನ ಯಳನಾಡು, ಜಾನುಕೊಂಡ ತಿಪ್ಪೇಸ್ವಾಮಿ, ಸಿದ್ದೇಶ್ ಜಾನುಕೊಂಡ, ತಾಲೂಕು ಅಧ್ಯಕ್ಷ ಇಸಾಮುದ್ರ ಪ್ರಭು, ಹುಣಿಸೆಕಟ್ಟೆ ಕಾಂತರಾಜ್,ಮುದ್ದಾಪುರ ನಾಗಣ್ಣ, ರಂಗೇಗೌಡ,ಮೊಳಕಾಲ್ಮುರುಮಂಜುನಾಥ ಸಭೆಯಲ್ಲಿ ಪಾಲ್ಗೊಂಡಿದ್ದರು.



**ಚಳ್ಳಕೆರೆ ತಾಲ್ಲೂಕಿನ ಬುಡ್ನಹಟ್ಟಿ ಗ್ರಾಮದ ತೋಟದಲ್ಲಿ ಹಮ್ಮಿಕೊಂಡಿದ್ದ ಪೂಜಾ ಕಾರ್ಯದಲ್ಲಿ ಪಾಲ್ಗೊಂಡಿದ್ದ ಸಂಸದ ಗೋವಿಂದ ಎಂ.ಕಾರಜೋಳರವರನ್ನು ಸನ್ಮಾನಿಸಲಾಯಿತು. ಬಿಜೆಪಿ ಜಿಲ್ಲಾ ಕಾರ್ಯದರ್ಶಿ ಬಾಳೆಮಂಡಿರಾಮದಾಸ್, ಜಿಲ್ಲಾ ಮುಖಂಡರಾದ ಜೆ.ಪಿ.ಜಯಪಾಲಯ್ಯ, ಸಿ.ಎಸ್.ಪ್ರಸಾದ್, ಎನ್.ಓಬಳೇಶ್, ಬಾಳೆಮಂಡಿವೆಂಕಟೇಶ್, ಮಂಡಲಾಧ್ಯಕ್ಷ ಸೂರನಹಳ್ಳಿ ಶ್ರೀನಿವಾಸ್, ಮೊಳಕಾಲ್ಮೂರು ಅಧ್ಯಕ್ಷ ಪಿ.ಆರ್. ಮಂಜುನಾಥ, ಎಚ್.ವಿ.ಪ್ರಕಾಶ್‌ರೆಡ್ಡಿ, ಭರತೇಶ್‌ರೆಡ್ಡಿ, ಬಿ.ನಾಗರಾಜು, ಟಿ. ಮಂಜುನಾಥ, ಚಂದ್ರಶೇಖರ್ ಮುಂತಾದವರು ಉಪಸ್ಥಿತರಿದ್ದರು.**

## ಜಾಜೂರು ಸಿಡಿಲಿಗೆ 106 ಕುರಿ ಬಲಿ

**ಚಳ್ಳಕೆರೆ:** ತಾಲ್ಲೂಕಿನ ಜಾಜೂರು ಗ್ರಾಮದಲ್ಲಿ ಕಳೆದ ಆ.17ರಂದು ಬೆಳಗ್ಗೆ ಸಿಡಿಲಿಗೆ ಗ್ರಾಮದ ಅಂಜಿನಪ್ಪನವರ 90, ಓಬಯ್ಯನವರ 16 ಕುರಿಗಳು ಸಿಡಿಲಿಗೆ ಬಲಿಯಾಗಿದ್ದು, ಪರಿಹಾರವನ್ನು ನೀಡುವಂತೆ ಸರ್ಕಾರಕ್ಕೆ ತಹಶೀಲ್ದಾರ್ ರೇಹಾನ್ ಪಾಷ ಜಿಲ್ಲಾಧಿಕಾರಿಗಳ ಮೂಲಕ ಮನವಿ ಸಲ್ಲಿಸಿದ್ದರು. ಸಾಮಾನ್ಯವಾಗಿ ಹಲವಾರು ಪ್ರಕರಣಗಳಲ್ಲಿ ಪರಿಹಾರವನ್ನು ನೀಡುವ ನಿಟ್ಟಿನಲ್ಲಿ ವಿಳಂಬ ನೀತಿ ಅನುಸರಿಸುತ್ತಿದ್ದರೂ ಜಾಜೂರಿನ ಕುರಿ ಸಾವಿನ ಪ್ರಕರಣದಲ್ಲಿ ಸರ್ಕಾರ ಕೇವಲ 10ದಿನದಲ್ಲಿ ಪರಿಹಾರವನ್ನು ನೀಡುವ ಮೂಲಕ ನೊಂದವರಿಗೆ ಸಹಾಯಕಮಾಡಿದೆ.



ಪುಟ ↘ 2

### ಪ್ರಮುಖ ಸುದ್ದಿ

# ಸುಮಿತ ಚಿತ್ರದುರ್ಗ ನಗರಸಭೆ ಅಧ್ಯಕ್ಷೆ, ಶ್ರೀದೇವಿ ಉಪಾಧ್ಯಕ್ಷೆ

» ಚಿತ್ರದುರ್ಗ

ಚಿತ್ರದುರ್ಗ ನಗರಸಭೆಯ ಅಧ್ಯಕ್ಷ ಹಾಗೂ ಉಪಾಧ್ಯಕ್ಷಸ್ಥಾನಗಳ ಆಯ್ಕೆಗೆ ಸೋಮವಾರ ನಡೆದ ಚುನಾವಣೆಯಲ್ಲಿ, ಅಧ್ಯಕ್ಷರಾಗಿ ಸುಮಿತ.ಬಿ.ಎನ್ ಹಾಗೂ ಉಪಾಧ್ಯಕ್ಷರಾಗಿ ಶ್ರೀದೇವಿ.ಜಿ.ಎಸ್ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸಿದ ಉಪವಿಭಾಗಾಧಿಕಾರಿ ಎಂ.ಕಾರ್ತಿಕ್ ಘೋಷಿಸಿದರು.

ಅಧ್ಯಕ್ಷ ಸ್ಥಾನಕ್ಕೆ ಸದಸ್ಯರಾದ ಸುಮಿತ.ಬಿ.ಎಂ ಹಾಗೂ ತಾರಕೇಶ್ವರಿ ಎಸ್.ಸಿ, ಉಪಾಧ್ಯಕ್ಷ ಸ್ಥಾನಕ್ಕೆ ಸದಸ್ಯರಾದ ಶ್ರೀದೇವಿ.ಜಿ.ಎಸ್ ಹಾಗೂ ರೋಹಿಣಿ.ಬಿ.ಎಸ್ ನಾಮಪತ್ರ ಸಲ್ಲಿಸಿದ್ದರು. ಯಾರೂ ಕೂಡ ನಾಮಪತ್ರ ಹಿಂಪಡೆಯದ ಕಾರಣ ಮತದಾನ ಪ್ರಕ್ರಿಯೆ ಕೈಗೊಳ್ಳಲಾಯಿತು.

ಚಿತ್ರದುರ್ಗ ನಗರಸಭೆ 35 ಜನ ಚುನಾಯಿತ ಸದಸ್ಯ ಬಲ ಹೊಂದಿದೆ. ಈ ಪೈಕಿ ಓರ್ವ ಸದಸ್ಯರು ಮೃತ ಪಟ್ಟಿದ್ದರಿಂದ ಚುನಾಯಿತ ನಗರಸಭೆ ಸದಸ್ಯರ ಬಲ 34ಕ್ಕೆ ಇಳಿಕೆಯಾಗಿತ್ತು. ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಗಳ ಆಯ್ಕೆಗೆ ನಡೆದ ಚುನಾವಣೆಯಲ್ಲಿ ನಗರಸಭೆ ವ್ಯಾಪ್ತಿ ಪ್ರತಿನಿಧಿಸುವ ವಿಧಾನಸಭಾ ಕ್ಷೇತ್ರ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಹಾಜರಾಗಿದ್ದರು.

ಸೋಮವಾರ ನಡೆದ ಅಧ್ಯಕ್ಷ ಉಪಾಧ್ಯಕ್ಷ ಆಯ್ಕೆ ಚುನಾವಣೆಯಲ್ಲಿ ಒಟ್ಟು 35 ಸದಸ್ಯರು ಮತ ಚಲಾಯಿಸಿದರು. ಈ ಪೈಕಿ ಸುಮಿತ.ಬಿ.ಎನ್ ಹಾಗೂ ಶ್ರೀದೇವಿ.ಜಿ.ಎಸ್ ತಲಾ 22 ಮತಗಳನ್ನು ಪಡೆಯುವ ಮೂಲಕ ಅನುಕ್ರಮವಾಗಿ ನಗರಸಭೆ ಅಧ್ಯಕ್ಷೆ ಹಾಗೂ ಉಪಾಧ್ಯಕ್ಷೆ ಗಾದಿಗೆ ಏರಿದ್ದಾರೆ.ಚುನಾವಣಾ ನಂತರ ಮಾಧ್ಯಮದವರೊಂದಿಗೆ ಮಾತನಾಡಿದ ಶಾಸಕ ಕೆ.ಸಿ.ವಿರೇಂದ್ರ ಪಪ್ಪಿ ನಗರದ ಅಭಿವೃದ್ಧಿಗಾಗಿ ಸದಸ್ಯರು ಸುಮಿತ.ಬಿ.ಎನ್ ಅವರನ್ನು ಅಧ್ಯಕ್ಷರಾಗಿ ಹಾಗೂ ಶ್ರೀದೇವಿ.ಜಿ.ಎಸ್ ಉಪಾಧ್ಯಕ್ಷರನ್ನಾಗಿ ಬಹುಮತದಿಂದ ಆಯ್ಕೆ ಮಾಡಿದ್ದಾರೆ. ಇವರ ಆಯ್ಕೆ ಸಹರಿಸಿದ ಎಲ್ಲಾ ಸದಸ್ಯರಿಗೆ ಧನ್ಯವಾದಗಳನ್ನು ತಿಳಿಸಿದರು.

ನೂತನ ಅಧ್ಯಕ್ಷೆ ಸುಮಿತ. ಬಿ.ಎನ್. ಮಾತನಾಡಿ ನಗರದ ಸ್ವಚ್ಛತೆ ಹಾಗೂ ಅಭಿವೃದ್ಧಿಗೆ ಒತ್ತು ನೀಡಿ ಕಾರ್ಯ ನಿರ್ವಹಿಸುವುದಾಗಿ ತಿಳಿಸಿದರು.

ನೂತನ ಉಪಾಧ್ಯಕ್ಷೆ ಶ್ರೀದೇವಿ.ಜಿ.ಎಸ್ ಮಾತನಾಡಿ ಶಾಸಕರ ನೇತೃತ್ವದಲ್ಲಿ ವಾರ್ಡ್‌ನಲ್ಲಿ ಸಾಕಷ್ಟು ಅಭಿವೃದ್ಧಿ ಕಾರ್ಯ ಮಾಡಿದ್ದೇನೆ. ಮುಂದೆಯೂ ಜನಪ್ರತಿನಿಧಿಗಳ ಸಹಕಾರ ಪಡೆದು ಅಭಿವೃದ್ಧಿಕಾರ್ಯಮುಂದುವರೆಸುವುದಾಗಿ ತಿಳಿಸಿದರು.ಚುನಾವಣೆಯ ವೇಳೆ ತಹಶೀಲ್ದಾರ್ ಡಾ.ನಾಗವೇಣಿ ಹಾಗೂ ನಗರಸಭೆ ಆಯುಕ್ತೆ ರೇಣುಕಾ.ಎಂ ಉಪಸ್ಥಿತರಿದ್ದರು.






## ಫಾಸ್ಟ್ ನ್ಯೂಸ್

### ಉದ್ಯಮ ಕೇಂದ್ರ ಯೋಜನೆ: ಕುಶಲಕರ್ಮಿಗಳಿಂದ ಅರ್ಜಿ ಆಹ್ವಾನ

» ಚಿತ್ರದುರ್ಗ

ಜಿಲ್ಲಾ ಉದ್ಯಮ ಕೇಂದ್ರ ಯೋಜನೆ ಹಾಗೂ ವೃತ್ತಿಪರ ಕುಶಲಕರ್ಮಿಗಳಿಗೆ ಉಚಿತ ಉಪಕರಣ ಸರಬರಾಜು ಯೋಜನೆಯಡಿ ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. . ಸೆಪ್ಟೆಂಬರ್ 1 ರಿಂದ ಅರ್ಜಿ ಸಲ್ಲಿಕೆ ಪ್ರಕ್ರಿಯೆ ಪ್ರಾರಂಭವಾಗಲಿದ್ದು, ಅರ್ಜಿ ಸಲ್ಲಿಸಲು ಅಕ್ಟೋಬರ್ 31 ಕೊನೆಯ ದಿನವಾಗಿದೆ. 2024–25ನೇ ಪ್ರಸಕ್ತ ಸಾಲಿಗೆ ಜಿಲ್ಲಾ ಉದ್ಯಮ ಕೇಂದ್ರ ಯೋಜನೆಯಡಿ ಸ್ವ ಉದ್ಯೋಗ ಕೈಗೊಳ್ಳಲು ಆರ್ಥಿಕವಾಗಿ ಹಿಂದುಳಿದ ಗ್ರಾಮೀಣ ಭಾಗದ ಮಹಿಳಾ ಫಲಾನುಭವಿಗಳಿಗೆ ಪ್ರತಿ ಗ್ರಾಮ ಪಂಚಾಯತ್‌ಗೆ ಒಟ್ಟು 02 ಹೊಲಿಗೆ ಯಂತ್ರಗಳು ಹಾಗೂ ಗ್ರಾಮೀಣ ಭಾಗದ ವೃತ್ತಿ ನಿರತ ಕುಶಲಕರ್ಮಿಗಳಿಗೆ ಉಚಿತ ಉಪಕರಣ ಸರಬರಾಜು ಯೋಜನೆಯಡಿ ಪ್ರತಿ ಗ್ರಾಮ ಪಂಚಾಯತ್‌ಗೆ ಒಟ್ಟು 01 ಗಾರೆ ಮತ್ತು 01 ಧೋಭಿ ವೃತ್ತೀಯ ಸುಧಾರಿತ ಉಪಕರಣಗಳನ್ನು ಉಚಿತವಾಗಿ ವಿತರಿಸಲು ಗ್ರಾಮಾಂತರ ಕೈಗಾರಿಕೆ ಕಚೇರಿಯಿಂದ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಅರ್ಹ ಫಲಾನುಭವಿಗಳನ್ನು ಸಂಬಂಧಿಸಿದ ಗ್ರಾಮ ಪಂಚಾಯತಿಗಳ ಗ್ರಾಮ ಸಭೆಯ ಮೂಲಕ ಆಯ್ಕೆ ಮಾಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ತಮ್ಮ ವ್ಯಾಪ್ತಿಯ ಗ್ರಾಮ ಪಂಚಾಯಿತಿಗಳನ್ನು ಸಂಪರ್ಕಿಸಬಹುದು ಎಂದು ಗ್ರಾಮಾಂತರ ಕೈಗಾರಿಕಾ ವಿಭಾಗದ ಉಪನಿರ್ದೇಶಕರು ತಿಳಿಸಿದ್ದಾರೆ.

### ಜಿಟಿಟಿಸಿ ಪ್ರವೇಶಾತಿಗೆ ಅರ್ಜಿ ಆಹ್ವಾನ

» ಚಿತ್ರದುರ್ಗ

ಚಿತ್ರದುರ್ಗ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ (ಜಿಟಿಟಿಸಿ) ಕೇಂದ್ರದಲ್ಲಿ ಡಿಪ್ಲೋಮಾ ಕೋರ್ಸ್‌ಗಳಾದ ಡಿಪ್ಲೋಮಾ ಇನ್ ಟೂಲ್ ಅಂಡ್ ಡೈ ಮೇಕಿಂಗ್, ಡಿಪ್ಲೊಮಾ ಇನ್ ಮೆಕಾಟ್ರಾನಿಕ್ಸ್, ಡಿಪ್ಲೊಮಾ ಇನ್ ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಷನ್ ಇಂಜಿನಿಯರಿಂಗ್ ಕೋರ್ಸ್‌ಗಳಿಗೆ ಎಸ್‌ಎಸ್‌ಎಲ್‌ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಮತ್ತು ಪಿಯುಸಿ ಪಾಸ್, ಫೇಲ್ ಆದ ವಿದ್ಯಾರ್ಥಿಗಳನ್ನು ನೇರ ಪ್ರವೇಶಾತಿಗೆ ಅವಕಾಶ ಕಲ್ಪಿಸಲಾಗಿದ್ದು, ಚಿತ್ರದುರ್ಗ ಜಿಟಿಟಿಸಿ ಕೇಂದ್ರದಲ್ಲಿ "ಮೊದಲು ಬಂದವರಿಗೆ ಮೊದಲ ಆದ್ಯತೆ' ಮೇರೆಗೆ ಪ್ರವೇಶ ಪ್ರಕ್ರಿಯೆ ಮಾಡಲಾಗುತ್ತಿದೆ. ಆಗಸ್ಟ್ 31 ಪ್ರವೇಶಾತಿಗೆ ಕಡೆಯ ದಿನಾಂಕವಾಗಿದೆ. ಹೆಚ್ಚಿನ ಮಾಹಿತಿಗಾಗಿ ಚಿತ್ರದುರ್ಗ ಸರ್ಕಾರಿ ಉಪಕರಣಗಾರ ಮತ್ತು ತರಬೇತಿ ಕೇಂದ್ರ, ಸರ್ವೆ ನಂ.44 ಹಳೆಯ ಬೆಂಗಳೂರು ರಸ್ತೆ, ಕಣಿವೆ ಮಾರಮ್ಮ ದೇವಸ್ಥಾನ ಹಿಂಭಾಗ ಕುಂಚಿಗನಾಳ್, ಚಿತ್ರದುರ್ಗ, ದೂರವಾಣಿ ಸಂಖ್ಯೆ 9738465834, 948186655, 9945646114 ಗೆ ಸಂಪರ್ಕಿಸಬಹುದು ಎಂದು ಚಿತ್ರದುರ್ಗ ಜಿಟಿಟಿಸಿ ಕೇಂದ್ರದ ಪ್ರಾಂಶುಪಾಲರು ತಿಳಿಸಿದ್ದಾರೆ.

### ಗೌರಸಮುದ್ರ ಮಾರಮ್ಮನ ಜಾತ್ರೆ: ಪ್ರಾಣಿ ಬಲಿ ನಿಷೇಧ

» ಚಿತ್ರದುರ್ಗ

ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿನ ಗೌರಸಮುದ್ರ ಗ್ರಾಮದಲ್ಲಿ ಸೆಪ್ಟೆಂಬರ್ 2 ಮತ್ತು 3ರಂದು ಗೌರಸಮುದ್ರ ಮಾರಮ್ಮ ದೇವಿ ಜಾತ್ರ ಮಹೋತ್ಸವ ನಡೆಯಲಿದೆ. ಈ ಜಾತ್ರೆಗೆ ಲಕ್ಷಾಂತರ ಜನ ಭಕ್ತಾಧಿಗಳು ಆಗಮಿಸಲಿದ್ದಾರೆ. ಈ ಜಾತ್ರೆಗೆ ಬರುವ ಭಕ್ತಾಧಿಗಳು ಯಾವುದೇ ರೀತಿಯ ಪ್ರಾಣಿ ಬಲಿಯನ್ನು ಮಾಡಬಾರದು ಹಾಗೂ ಅಕ್ರಮ ಮದ್ಯ ಮಾರಾಟ ಮತ್ತು ಜೂಜಾಟ ಆಡಬಾರದು ಎಂದು ಸಾರ್ವಜನಿಕರಿಗೆ ತಿಳಿಯಪಡಿಸಿದೆ. ಪ್ರಾಣಿ ಬಲಿ, ಅಕ್ರಮ ಮದ್ಯ ಮಾರಾಟ, ಮತ್ತು ಜೂಜಾಟವಾಡಿದ ಪಕ್ಷದಲ್ಲಿ ಶಿಕ್ಷೆಗೆ ಗುರಿಪಡಿಸಲಾಗುವುದು.

## ಫಾಸ್ಟ್ ನ್ಯೂಸ್

### ಬೆಂಬಲ ಬೆಲೆ ಯೋಜನೆಯಡಿ ಹೆಸರುಕಾಳು ಖರೀದಿ

» **ಚಿತ್ರದುರ್ಗ**

ಸರ್ಕಾರದ ಆದೇಶದ ಹಿನ್ನಲೆಯಲ್ಲಿ ಸೋಮವಾರ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಟಾಸ್ಕ್‌ಫೋರ್ಸ್ ಸಮಿತಿ ಅಧ್ಯಕ್ಷರು ಸಭೆ ನಡೆಸಿ, ಬೆಂಬಲ ಬೆಲೆ ಯೋಜನೆಯಡಿ ಹೆಸರುಕಾಳು ಖರೀದಿಯನ್ನು ಕರ್ನಾಟಕ ಸಹಕಾರ ಮಾರಾಟ ಮಂಡಳಿ ವತಿಯಿಂದ ಕ್ವಿಂಟಲ್‌ಗೆ ರೂ.8,682/–ರಂತೆ ಖರೀದಿ ಮಾಡಲಿದ್ದಾರೆ. ನೋಂದಣಿ ಕಾಲಾವಧಿಯನ್ನು 45 ದಿನಗಳವರೆಗೆ ಹಾಗೂ ಖರೀದಿ ಅವಧಿಯನ್ನು 90 ದಿನಗಳವರೆಗೆ ನಿಗಧಿಪಡಿಸಿದೆ. ಆದ್ದರಿಂದ ಜಿಲ್ಲೆಯಲ್ಲಿ ಹೆಸರುಕಾಳು ಬೆಳೆಗಾರರು ಪ್ರತಿ ಎಕರೆಗೆ 2 ಕ್ವಿಂಟಲ್ ಹಾಗೂ ಗರಿಷ್ಟ 10 ಕ್ವಿಂಟಲ್‌ವರೆಗೆ ಚಿತ್ರದುರ್ಗ ಹಾಗೂ ಹೊಸದುರ್ಗದಲ್ಲಿ ಪ್ರಾರಂಭಿಸುವ ಖರೀದಿ ಕೇಂದ್ರಕ್ಕೆ ಮಾರಾಟ ಮಾಡಬಹುದಾಗಿದೆ. ಈ ಸಂದರ್ಭದಲ್ಲಿ ಕೃಷಿ ಮಾರಾಟ ಇಲಾಖೆ ಉಪನಿರ್ದೇಶಕರು, ಕೃಷಿ ಇಲಾಖೆ ಜಂಟಿ ನಿರ್ದೇಶಕರು, ಚಿತ್ರದುರ್ಗ ಹಾಗೂ ಹೊಸದುರ್ಗ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಕಾರ್ಯದರ್ಶಿಗಳು ಇದ್ದರು.

### ಮಹಿಳೆ ಪತ್ತೆಗೆ ಮನವಿ

» **ಚಿತ್ರದುರ್ಗ**

ಚಿತ್ರದುರ್ಗ ನಗರದ ಗೋಪಾಲಪುರ ರಸ್ತೆಯ ನಿವಾಸಿ ನಜ್ಮಾ ಗಂಡ ಸರ್ಧಾರ್ (ಸು.49ವರ್ಷ) ಕಾಣೆಯಾದ ಪ್ರಕರಣ ಆಗಸ್ಟ್ 25 ರಂದು ಚಿತ್ರದುರ್ಗ ನಗರ ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ. ಕಾಣೆಯಾದ ನಜ್ಮಾ, 5 ಅಡಿ ಎತ್ತರ, ದುಂಡು ಮುಖ, ಗೋಧಿ ಮೈಬಣ್ಣ, ಸಾಧಾರಣ ಮೈಕಟ್ಟು, ತಲೆಯಲ್ಲಿ ಕೂದಲು ಹೊಂದಿದ್ದು, ಕನ್ನಡ ಹಾಗೂ ಉರ್ದು ಭಾಷೆ ಮಾತನಾಡುವರು. ಮನೆಯಿಂದ ಹೋಗುವಾಗ ನಸೇ ಬಣ್ಣದ ಸೀರೆ ಮತ್ತು ನಸೇ ಬಣ್ಣದ ಜಾಕೀಟ್ ಧರಿಸಿರುತ್ತಾರೆ. ಈ ಮಹಿಳೆ ಕುರಿತು ಮಾಹಿತಿ ಕಂಡುಬಂದಲ್ಲಿ ಚಿತ್ರದುರ್ಗ ನಗರ ಪೊಲೀಸ್ ಠಾಣೆ ದೂರವಾಣಿ ಸಂಖ್ಯೆ 08194–222333, 9480803146 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

### ಯುವಕ ಕಾಣೆ

» **ಚಿತ್ರದುರ್ಗ**

ಚಳ್ಳಕೆರೆ ಟೌನ್ ತ್ಯಾಗರಾಜ ನಗರದ ಬಾಪೂಜಿ ಕಾಲೇಜಿನ ಹಿಂಭಾಗದ ನಿವಾಸಿ ಮೃತ್ಯುಂಜಯ ಜೆ.ಜೆ (20 ವರ್ಷ) ಅವರು ಕಾಣೆಯಾದ ಪ್ರಕರಣ ಜುಲೈ 30ರಂದು ಚಳ್ಳಕೆರೆ ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ. ಕಾಣೆಯಾದ ಮೃತ್ಯುಂಜಯ, 5.4 ಅಡಿ ಎತ್ತರ, ನೀಳ ಮುಖ, ಗೋಧಿ ಮೈಬಣ್ಣ, ಸಾಧಾರಣ ಮೈಕಟ್ಟು ಹೊಂದಿದ್ದು, ಕನ್ನಡ, ಇಂಗ್ಲೀಷ್ ಮತ್ತು ಹಿಂದಿ ಭಾಷೆಯನ್ನು ಮಾತನಾಡುವರು. ಮನೆಯಿಂದ ಹೋಗುವಾಗ ಹಸಿರು ಬಣ್ಣದ ಜಾಗ್ವರ್ ಪ್ಯಾಂಟ್ ಹಾಗೂ ಬಿಳಿಯ ಅರ್ಧ ತೋಳಿನ ಕೇಸರಿ ಹಸಿರು ಬಣ್ಣದ ಫ್ರಿಂಟೆಡ್ ಟೀ ಶರ್ಟ್ ಧರಿಸಿರುತ್ತಾನೆ. ಈ ಮೇಲ್ಕಂಡ ಯುವಕನ ಬಗ್ಗೆ ಮಾಹಿತಿ ದೊರೆತಲ್ಲಿ ಚಳ್ಳಕೆರೆ ಪೊಲೀಸ್ ಠಾಣೆ ದೂರವಾಣಿ ಸಂಖ್ಯೆ 08195–250239, ನಿರೀಕ್ಷಕರ ದೂರವಾಣಿ ಸಂಖ್ಯೆ 9480803112, ಚಳ್ಳಕೆರೆ ಉಪಾಧೀಕ್ಷಕ ಕಚೇರಿ ದೂರವಾಣಿ ಸಂಖ್ಯೆ 08195–251010 ಹಾಗೂ ಜಿಲ್ಲಾ ನಿಸ್ತಂತು ಕೇಂದ್ರ ಸಂಖ್ಯೆ 08194–222782 ಗೆ ಸಂಪರ್ಕಿಸಲು ಪ್ರಕಟಣೆ ತಿಳಿಸಿದೆ.

### ಜಾಜೂರು ಸಿಡಿಲಿಗೆ 106 ಕುರಿ ಬಲಿ

» **ಮೊದಲ ಪುಟದಿಂದ**

ತಹಶೀಲ್ದಾರ್ ರೇಹಾನ್ ಪಾಷ ಈ ಬಗ್ಗೆ ಮಾಹಿತಿ ನೀಡಿ, ಪ್ರತಿಕುರಿಗೆ 4 ಸಾವಿರದಂತೆ ಒಟ್ಟು 4.24 ಲಕ್ಷ ರೂಪಾಯಿ ಹಣವನ್ನು ರೈತರ ಖಾತೆಗೆ ಆನ್‌ಲೈನ್ ಮೂಲಕ ಜಮಾ ಮಾಡಲಾಗಿದೆ. ಪ್ರಕೃತಿ ವಿಕೋಪ ನಿಧಿಯಡಿ ಈ ಹಣವನ್ನು ನೀಡಲಾಗಿದೆ ಎಂದಿದ್ದಾರೆ.

### ಶ್ರೀಕೃಷ್ಣ ಜನ್ಮಾಷ್ಟಮಿ: ಪ್ರತಿಮೆಗಳಿಗೆ ಮಾಲಾರ್ಪಣೆ



» **ಚಿತ್ರದುರ್ಗ**

ಶ್ರೀಕೃಷ್ಣ ಜನ್ಮಾಷ್ಟಮಿ ಅಂಗವಾಗಿ ನಗರದಲ್ಲಿರುವ ಪ್ರತಿಮೆಗಳಿಗೆ ಸೋಮವಾರ ಮಾಲಾರ್ಪಣೆ ಮಾಡಲಾಯಿತು. ಕನಕದಾಸ, ಸಂಗೊಳ್ಳಿರಾಯಣ್ಣ, ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್, ವೀರವನಿತೆ ಒನಕೆ ಓಬವ್ವ, ಶೌರ್ಯ ಪರಾಕ್ರಮಕ್ಕೆ ಹೆಸರಾಗಿರುವ ರಾಜವೀರ ಮದಕರಿನಾಯಕನ ಪ್ರತಿಮೆಗೆ ಮಾಲಾರ್ಪಣೆ ಸಲ್ಲಿಸಲಾಯಿತು. ಶ್ರೀಕೃಷ್ಣಯಾದವಾನಂದಸ್ವಾಮಿ, ಕೆ.ಎಂ.ಹಾಲಸ್ವಾಮಿ, ಸಿ.ಟಿ.ಕೃಷ್ಣಮೂರ್ತಿ, ಸಂಪತ್‌ಕುಮಾರ್ ಟಗರನಹಟ್ಟಿ, ಕದುರಪ್ಪ ಈರಜ್ಜನಹಟ್ಟಿ, ಜಿ.ವಿ.ಮಧುಗೌಡ, ಜಾಲಿಕಟ್ಟೆ ಜಗದೀಶ್, ನಾಗರಾಜ್ ಹಾಜರಿದ್ದರು.

# ರಾಜ್ಯಪಾಲರ ವಿರುದ್ಧ ಪಂಜಿನ ಮೆರವಣಿಗೆ

» **ಚಿತ್ರದುರ್ಗ**



ಕರ್ನಾಟಕ ಶೋಷಿತ ಸಮುದಾಯಗಳ ಮಹಾ ಒಕ್ಕೂಟ ಹಾಗೂ ಕರ್ನಾಟಕ ರಾಜ್ಯ ಹಿಂದುಳಿದ ಜಾತಿಗಳ ಒಕ್ಕೂಟದವತಿಯಿಂದ ಸೋಮವಾರ ನಗರದಲ್ಲಿ ರಾಜ್ಯಪಾಲರ ಹಠಾವೂ ಅಂಗವಾಗಿ ಪಂಜಿನ ಮೆರವಣಿಗೆಯನ್ನು ನಡೆಸಲಾಯಿತು.

ನಗರದ ಹೊಳಲ್ಕೆರೆ ರಸ್ತೆಯಲ್ಲಿನ ಸಂಗೊಳ್ಳಿ ರಾಯಣ್ಣ ವೃತ್ತದಿಂದ ಸಂತೇಪೇಟೆ, ಬಿ.ಡಿ.ರಸ್ತೆ, ಎಸ್.ಬಿ.ಎಂ, ವೃತ್ತ, ಮಹಾವೀರ ವೃತ್ತದ ಮೂಲಕ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಲ್ಲಿ ಅಂಬೇಡ್ಕರ್‌ರವರಿಗೆ ಮಾಲಾರ್ಪಣೆ ಮಾಡು ವುದರ ಮೂಲಕ ಸಮಾಪ್ತಿ ಮಾಡಲಾಯಿತು.

ಕರ್ನಾಟಕ ಶೋಷಿತ ಸಮುದಾಯಗಳ ಮಹಾ ಒಕ್ಕೂಟ ಹಾಗೂ ಕರ್ನಾಟಕ ರಾಜ್ಯ ಹಿಂದುಳಿದ ಜಾತಿಗಳ ಒಕ್ಕೂಟದವತಿಯಿಂದ ಪದಾಧಿಕಾರಿಗಳು, ಕಾರ್ಯಕರ್ತರು ದಾರಿಯುದ್ದಕ್ಕೂ ಸಿದ್ದರಾಮಯ್ಯರವರ ಪರವಾಗಿ ಹಾಗೂ ರಾಜ್ಯಪಾಲರ ಮತ್ತು ಬಿಜೆಪಿ ಪಕ್ಷದ ವಿರುದ್ದವಾಗಿ ಘೋಷಣೆಗಳನ್ನು ಕೂಗಲಾಯಿತು. ನಗರದ ಸಂತೇಪೇಟೆ ವೃತ್ತದಲ್ಲಿ ಮಾನವ ಸರಪಳಿಯನ್ನು ನಿರ್ಮಾಣ ಮಾಡುವುದರ ಮೂಲಕ ಸಿದ್ದರಾಮಯ್ಯ ರವರ ಪರವಾಗಿ ನಾವು ಇದ್ದೇವೆ ಎಂಬ ಸಂದೇಶವನ್ನು ಸಾರಲಾಯಿತು. ರಾಜ್ಯಪಾಲರನ್ನು ರಾಜ್ಯದಿಂದ ವಾಪಾಸ್ಸು ಕರೆಸುವಂತೆ ರಾಷ್ಟ್ರಪತಿಗಳನ್ನು ಒತ್ತಾಯಿಸಲಾಯಿತು.

ಈ ಸಂದರ್ಬದಲ್ಲಿ ಮಾತನಾಡಿದ ಅಹಿಂದ ಮುಖಂಡ ಬಿ.ಟಿ.ಜಗದೀಶ್ ಸಿದ್ದರಾಮಯ್ಯರವರ ಪರವಾಗಿ ರಾಜ್ಯ ಹಿಂದುಳಿದ, ಅಲ್ಪ ಸಂಖ್ಯಾತ, ಪರಿಶಿಷ್ಟ ಜಾತಿ ಪಂಗಡ ಸೇರಿದಂತೆ ಇತರರು ಸಹಾ ಬೆಂಬಲವಾಗಿದ್ದಾರೆ ಸಿದ್ದರಾಮಯ್ಯ ಹೆದರುವ ಅವಶ್ಯಕತೆ ಇಲ್ಲ ಎಂದು ಸಿದ್ದರಾಮಯ್ಯರವರಿಗೆ ಮನವರಿಕೆ ಮಾಡಿ, ರಾಜ್ಯಪಾಲರು ಮುಖ್ಯಮಂತ್ರಿ ಸಿದ್ದರಾಮಯ್ಯ ರವರ ಮೇಲೆ ಪ್ರಾಸಿಕ್ಯೂಷ್‌ನ್ನಿಗೆ ಅನುಮತಿ ನೀಡುವಾಗ ಸಂವಿಧಾನದ ಮೂಲ ತತ್ವಗಳನ್ನು ಹಾಗೂ ಪ್ರಜಾಪ್ರಭುತ್ವದ ಆಶಯಗಳನ್ನು ಸಂಪೂರ್ಣವಾಗಿ ಗಾಳಿಗೆ ತೋರಿದ್ದಾರೆ. ರಾಜಭವನವನ್ನು ಕೋಮುವಾದಿ ರಾಜಕಾರಣ ಮಾಡುತ್ತಿರುವ ಬಿಜೆಪಿ ಮತ್ತು ಜೆಡಿಎಸ್, ಕಚೇರಿಯನ್ನಾಗಿ ಮಾಡಿಕೊಂಡಿದ್ದಾರೆ ಎಂದು ದೂರಿದರು.

ನಗರಸಭೆಯ ಮಾಜಿ ಅಧ್ಯಕ್ಷ ಹೆಚ್. ಮಂಜಪ್ಪ ಮಾತನಾಡಿ, ರಾಜ್ಯದಲ್ಲಿ ಅಧಿಕಾರವನ್ನು ನಡೆಸುತ್ತಿರುವ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರಕ್ಕೆ ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳು ರಾಜ್ಯಪಾಲರ ಮೂಲಕ ವಿನಾಕಾರಣ ಕಿರುಕುಳವನ್ನು ನೀಡುತ್ತಿದ್ದಾರೆ. ರಾಜ್ಯಪಾಲರು ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳ ತಾಳಕ್ಕೆ ಕುಣಿಯುತ್ತಿದ್ದಾರೆ. ಸಿದ್ದರಾಮಯ್ಯ ರವರು ಜನಪ್ರಿಯತೆಯನ್ನು ಸಹಿಸದ ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳು ಅವರ ಮೇಲೆ ಇಲ್ಲದ ಸಲ್ಲದ ಆರೋಪವನ್ನು ಹೊರೆಸಿ ಅವರ ಜನಪ್ರಿಯತೆಯನ್ನು ಕುಗ್ಗಿಸುವ ಕಾರ್ಯವನ್ನು ಮಾಡಿದರು ಇದಕ್ಕೆ ಬಗ್ಗದ ಸಿದ್ದರಾಮಯ್ಯರವರ ವಿರುದ್ದ ಎಂದೋ ನಡೆದ ಮುಡಾ ಹಗರಣವನ್ನು ಬಯಲಿಗೆ ತಂದು ಅವರನ್ನು ತೋಜೋವಧೆ ಮಾಡುವ ಕಾರ್ಯವನ್ನು ಮಾಡಿದರು. ಇದರು ಸಫಲವಾಗದಿದ್ದಾಗ ಕೇಂದ್ರದಿಂದ ರಾಜ್ಯಪಾಲರ ಮೂಲಕ ಸಿದ್ದರಾಮಯ್ಯ ರವರಿಗೆ ನೋಟಿಸ್ ನೀಡುವ ಕಾರ್ಯವನ್ನು ಮಾಡಿ ಅವರನ್ನು ಕಾನೂನಿನಲ್ಲಿ ಸಿಕ್ಕಿ ಹಾಕಿಸುವ ಕಾರ್ಯವನ್ನು ಮಾಡಿದ್ದಾರೆ ಇದು ಖಂಡನೀಯವಾದದು ಎಂದರು.

ಈ ಸಂದರ್ಭದಲ್ಲಿ ಕರ್ನಾಟಕ ಶೋಷಿತ ಸಮುದಾಯಗಳ ಮಹಾ ಒಕ್ಕೂಟದ ಜಿಲ್ಲಾಧ್ಯಕ್ಷರಾದ ಸಿ.ಟಿ.ಕೃಷ್ಣಮೂರ್ತಿ, ದಸಂಸಯ ಮುಖಂಡರಾದ ದುರುಗೇಶ್, ನಗರಾಭೀವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷರಾದ ಆರ್.ಕೆ.ಸರ್ದಾರ, ವಿಶ್ವಕರ್ಮ ಸಮಾಜದ ಪ್ರಸನ್ನ ಕುಮಾರ್, ಜೆ.ಜೆ. ಹಟ್ಟಿ ತಿಪ್ಪೇಸ್ವಾಮಿ, ನಗರಸಭಾದ ಮಾಜಿ ಸದಸ್ಯರಾದ ಮಲ್ಲಿಕಾರ್ಜನ್, ನಿಶಾನಿ ಶಂಕರ್, ರಘು. ಮಾಲೇಶ್ ಸೇರಿದಂತೆ ಇತರರು ಭಾಗವಹಿಸಿದ್ದರು.

## ಸೆ.01ರಿಂದ ಮನೆ ಮನೆಗೆ ಜಾನುವಾರು ಗಣತಿ

» **ಚಿತ್ರದುರ್ಗ**

ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ವತಿಯಿಂದ ರಾಷ್ಟ್ರೀಯ ಕಾರ್ಯಕ್ರಮವಾದ 21ನೇ ಜಾನುವಾರು ಗಣತಿಯನ್ನು ದೇಶದಾದ್ಯಂತ ಏಕಕಾಲದಲ್ಲಿ ಹಮ್ಮಿಕೊಳ್ಳಲಾಗಿದ್ದು, ಈ ಕಾರ್ಯಕ್ರಮವು 2024ರ ಸೆಪ್ಟೆಂಬರ್ 01 ರಿಂದ ಡಿಸೆಂಬರ್ ಅಂತ್ಯದವರೆಗೆ ನಡೆಯಲಿದೆ.



ಚಿತ್ರದುರ್ಗ ಜಿಲ್ಲೆಯ ಎಲ್ಲಾ ನಗರ ಮತ್ತು ಗ್ರಾಮಾಂತರ ಪ್ರದೇಶಗಳಲ್ಲಿ ಇಲಾಖೆಯ ಗಣತಿದಾರರು ಪ್ರತಿಯೊಂದು ಮನೆ, ಉದ್ಯಮ, ಸಂಸ್ಥೆಗಳಿಗೆ ಭೇಟಿ ನೀಡಿ, ಎಲ್ಲಾ ತರಹದ ಪ್ರಾಣಿ, ಸಾಕುಪ್ರಾಣಿಗಳು ಹಾಗೂ ಕುಕ್ಕುಟಗಳ ಮಾಹಿತಿಯನ್ನು ಸಂಗ್ರಹಿಸುವರು. ಅಲ್ಲದೆ ಬೀದಿ ದನಗಳುಮತ್ತುಬೀದಿನಾಯಿಗಳಮಾಹಿತಿಯನ್ನೂ ಸಹ ಇದೇ ವೇಳೆ ಸಂಗ್ರಹಿಸಲಾಗುವುದು. ಇದಲ್ಲದೆ ಕುಟುಂಬಸ್ಥರ ಸಾಮಾಜಿಕ ಸ್ಥಿತಿ, ಉದ್ಯೋಗ, ವಿದ್ಯಾರ್ಹತೆ ಮತ್ತು ಕೃಷಿ ಹಿಡುವಳಿ ಬಗ್ಗೆಯೂ ಸಹ ಮಾಹಿತಿಯನ್ನೂ ಸಂಗ್ರಹಿಸುವರು.

21ನೇ ಜಾನುವಾರು ಗಣತಿ : ಜಿಲ್ಲೆಯಲ್ಲಿ ಆರು ತಾಲ್ಲೂಕುಗಳಿದ್ದು, ಒಟ್ಟು 1049 ಗ್ರಾಮಗಳಲ್ಲಿ 2,44,160 ಕುಟುಂಬಗಳಿವೆ. ಉಳಿದಂತೆ 168 ವಾರ್ಡ್‌ಗಳಲ್ಲಿ 74,505 ಕುಟುಂಬಗಳಿದ್ದು ಜಿಲ್ಲೆಯಲ್ಲಿ ಒಟ್ಟಾರೆ 3,18,665 ಕುಟುಂಬಗಳಿವೆ. ಗಣತಿಗಾಗಿ ಜಿಲ್ಲೆಯಲ್ಲಿ 75 ಎಣಿಕೆದಾರರು ಹಾಗೂ 18 ಮೇಲ್ವಿಚಾರಕರು ಕಾರ್ಯನಿರ್ವಹಿಸುವರು.

2018–19ರ 20ನೇ ಜಾನುವಾರು ಗಣತಿ ಮಾಹಿತಿಯಂತೆ ಜಿಲ್ಲೆಯಲ್ಲಿ 2,21,608 ದನಗಳು, 1,13,304 ಎಮ್ಮೆಗಳು, 13,52,087 ಕುರಿಗಳು, 3,85,058 ಮೇಕೆಗಳು, 2,177 ಹಂದಿಗಳು, 772 ಮೊಲಗಳು, 26,520 ನಾಯಿಗಳು, 55 ಕುದುರೆ, ಇತರೆ 1,740 ಜಾನುವಾರುಗಳು ಸೇರಿದಂತೆ ಒಟ್ಟು 21,03,321 ಜಾನುವಾರುಗಳಿರುವುದು ದಾಖಲಾಗಿತ್ತು. ಅಲ್ಲದೆ 17,40,470 ನಾಟಿಕೋಳಿ, 153 ಬಾತುಕೋಳಿ, ಇತರೆ 951 ಸೇರಿದಂತೆ ಒಟ್ಟು 17,41,574 ಕೋಳಿಗಳಿರುವುದು ದಾಖಲಾಗಿರುತ್ತದೆ.

ಗಣತಿ ಸಂದರ್ಭದಲ್ಲಿ, ಯಾವ ತಳಿಯ ಜಾನುವಾರುಗಳು? ಯಾವ ವಯಸ್ಸು, ಎಷ್ಟು ರೈತರು, ಯಾವ ವರ್ಗದ ರೈತರು, ಎಷ್ಟು ಮಹಿಳೆಯರು ಇದರಲ್ಲಿ ತೊಡಗಿಸಿಕೊಂಡಿದ್ದಾರೆ ಎಂಬುದನ್ನು ತಿಳಿದುಕೊಳ್ಳಲಾಗುತ್ತದೆ. ಈ ಮೂಲಕ ಸರಕಾರಗಳು ತಮ್ಮ ಮುಂದಿನ ಯೋಜನೆಯನ್ನು ಸಿದ್ದಪಡಿಸುವುದು ಇದರ ಮುಖ್ಯ ಉದ್ದೇಶವಾಗಿದೆ. ರೈತರು ಹಾಗೂ ಹೈನುಗಾರಿಕೆ ಕ್ಷೇತ್ರಗಳಿಗೆ ಬೇಕಾದ ನೀತಿ ಕಾರ್ಯಕ್ರಮ ನಿರೂಪಿಸುವುದಕ್ಕಾಗಿ ಗಣತಿಯ ಅಂಶಗಳು ಬಳಕೆಯಾಗುತ್ತವೆ.

ಗಣತಿಯಲ್ಲಿಸಂಗ್ರಹಿಸಲಾಗುವಮಾಹಿತಿಯನ್ನು ಗೌಪ್ಯವಾಗಿಟ್ಟು, ವರದಿ ಸಲ್ಲಿಸಲಾಗುವುದು. ಇದರಿಂದಾಗಿ ಅಂಕಿ ಅಂಶಗಳ ಆಧಾರದ ಮೇಲೆ ಕೇಂದ್ರ, ರಾಜ್ಯಮಟ್ಟದಲ್ಲಿ ಆರ್ಥಿಕ ಮತ್ತು ಸಾಮಾಜಿಕ ಕಾರ್ಯಕ್ರಮಗಳನ್ನು ಯೋಜಿಸಿ, ಅನುಷ್ಠಾನಗೊಳಿಸಲು ಅವಶ್ಯವಾಗಿದೆ. ಅದುದರಿಂದ ಗಣತಿದಾರರು ಕುಟುಂಬ, ಉದ್ಯಮ, ಸಂಸ್ಥೆಗಳಿಗೆ ಭೇಟಿ ನೀಡಿದಾಗ ಅವರಿಗೆ ಸಂಪೂರ್ಣ ಹಾಗೂ ಸ್ಪಷ್ಟ ಮಾಹಿತಿಯನ್ನು ನೀಡಿ ಸಹಕರಿಸಬೇಕು ಎಂದು ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ಉಪನಿರ್ದೇಶಕರು ತಿಳಿಸಿದ್ದಾರೆ.

## ಕ್ರೀಡೆಯಿಂದಲೂ ಸಾಧನೆ ಮಾಡಿ ವಿದ್ಯಾರ್ಥಿಗಳಿಗೆ ಶಾಸಕರಾದ ಬಸವರಾಜು ವಿ ಶಿವಗಂಗಾ ಸಲಹೆ



» **ಚನ್ನಗಿರಿ**

ವಿದ್ಯಾಭ್ಯಾಸದ ಜೊತೆಗೆ ಕ್ರೀಡೆಯಿಂದಲೂ ಸಾಧನೆ ಮಾಡಿ ದೇಶಕ್ಕೆ ಕೀರ್ತಿ ತರಬಹುದು ಎಂದು ವಿದ್ಯಾರ್ಥಿಗಳಿಗೆ ಶಾಸಕರಾದ ಬಸವರಾಜು ವಿ ಶಿವಗಂಗಾ ಸಲಹೆ ನೀಡಿದರು. ತಾಲ್ಲೂಕಿನ ಮೇದುಗೊಂಡನಹಳ್ಳಿಯ ಶ್ರೀ ಆಂಜನೇಯ ಪ್ರೌಢ ಶಾಲಾ ಆವರಣದಲ್ಲಿ ಚನ್ನಗಿರಿ ಗ್ರಾಮಾಂತರ ಮಟ್ಟದ ವಲಯ ಪ್ರೌಢಶಾಲಾ ವಿಭಾಗದ ಕ್ರೀಡಾಕೂಟಕ್ಕೆ ಚಾಲನೆ ನೀಡಿ ಈ ವಿಷಯ ತಿಳಿಸಿದರು. ಪಠ್ಯದ ಜೊತೆಗೆ ಕ್ರೀಡೆಗಳಲ್ಲೂ ವಿದ್ಯಾರ್ಥಿಗಳು ಭಾಗವಹಿಸಿಬೇಕು, ಆಸಕ್ತಿ ಹಾಗೂ ಶ್ರದ್ಧೆ ಇದ್ದರೆ ಜೀವನದಲ್ಲಿ ಯಾವುದೇ ಕ್ಷೇತ್ರವಿರಲಿ ಸಾಧನೆ ಮಾಡಿ ಹೆಸರು ತಂದುಕೊಳ್ಳಬಹುದೆಂದರು. ಕ್ರೀಡಯಲ್ಲಿ ಸಾಧನೆ ಮಾಡಿದ ವಿದ್ಯಾರ್ಥಿಗಳಿಗೆ ಸಂಪೂರ್ಣ ಬೆಂಬಲ ನೀಡುತ್ತೇನೆ, ರಾಜ್ಯ,ರಾಷ್ಟದಲ್ಲಿ ಸಾಧನೆ ಮಾಡುವಂತ ವಿದ್ಯಾರ್ಥಿಗಳಿಗೆ ಸರ್ಕಾರದಿಂದ ಸಿಗಬೇಕಾದ ಎಲ್ಲಾ ನೆರವು ದೊರಕಿಸಿಕೊಡಲು ಸಿದ್ಧ ಎಂದರು. ಕ್ರೀಡೆಯಿಂದ ಸಾಕಷ್ಟು ಅನುಕೂಲಗಳಿವೆ ಆರೋಗ್ಯವನ್ನು ಸದೃಢವಾಗಿಟ್ಟುಕೊಳ್ಳಬಹುದು, ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವನ್ನು ಕಾಪಾಡಿಕೊಳ್ಳಬಹುದು ಎಂದು ಶಾಸಕರಾದ ಬಸವರಾಜು ವಿ ಶಿವಗಂಗಾ ತಿಳಿಸಿದರು. ಕ್ರೀಡೆಯಲ್ಲಿ ಗೆದ್ದು ಪ್ರಶಸ್ತಿ ಪಡೆದು ಸಾಧನೆ ಮಾಡಿದವರಿಗೆ ಉದ್ಯೋಗದಲ್ಲೂ ಮೀಸಲಾತಿ ಸಿಗುತ್ತದೆ ಹೀಗಾಗಿ ವಿದ್ಯಾರ್ಥಿಗಳು ಕ್ರೀಡಾಕೂಟಗಳಲ್ಲಿಯೂ ಭಾಗಿಯಾಗಬೇಕು ತಮ್ಮ ಪ್ರತಿಭೆಗಳನ್ನು ಅನಾವರಣ ಮಾಡಬೇಕೆಂದರು. ಈ ವೇಳೆ ಬಿಇಓ, ದೈಹಿಕ ಶಿಕ್ಷಣ ಅಧಿಕಾರಿಗಳು ಗ್ರಾಮ ಪಂಚಾಯಿ ಆಡಳಿತ ಮಂಡಳಿ ಮತ್ತು ಶಾಲಾ ಅಭಿವೃದ್ಧಿ ಸಮಿತಿ, ಗ್ರಾಮದ ಮುಖಂಡರು ಸೇರಿದಂತೆ ಕ್ರೀಡಾಕೂಟಕ್ಕೆ ಪ್ರೋತ್ಸಾಹಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ಸರ್‌ಸಿ.ವಿರಾಮನ್ ಶಾಲೆಯಲ್ಲಿ ಶ್ರೀಕೃಷ್ಣ ಜನ್ಮಾಷ್ಟಮಿ ಸಂಭ್ರಮ

» **ಪರಶುರಾಂಪುರ**

ಗ್ರಾಮದ ಕೋರ್ಲಕುಂಟೆ ರಸ್ತೆಯಲ್ಲಿ ಬರುವ ಸರ್ ಸಿ.ವಿ ರಾಮನ್ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಸೋಮವಾರ ಶ್ರೀಕೃಷ್ಣ ಜನ್ಮಾಷ್ಟಮಿ ಸಂಭ್ರಮದಿಂದ ಜರುಗಿತು.



ಶಾಲೆಯ ವಿದ್ಯಾರ್ಥಿಗಳಲ್ಲಿ ಚಿಣ್ಣರು ಬಹುತೇಕ ಮಕ್ಕಳು ಕೃಷ್ಣ, ರಾಧೆ,ರುಕ್ಮಿಣಿಯರ ವೇಷಭೂಷಣಗಳಿಂದ ಗಮನ ಸೆಳೆದರು. ಕೃಷ್ಣನ ಹಾಡಿಗೆ ವಿಭಾಗವಾರು ಸಾಮೂಹಿಕವಾಗಿ ಹೆಜ್ಜೆ ಹಾಕಿದ ಕೃಷ್ಣ, ರಾಧೆಯರನ್ನು ಪೋಷಕರು, ಶಿಕ್ಷಕರು,ಸಾರ್ವಜನಿಕರು ಕಣ್ತುಂಬಿಕೊಂಡರು.

ಸಂಸ್ಥೆಯ ಕಾರ್ಯದರ್ಶಿ ರಾಜಕುಮಾರ್ ಮಾತನಾಡಿ,ಶಾಲೆಯಲ್ಲಿ ರಾಷ್ಟ್ರೀಯ ಹಬ್ಬಗಳ ಸಹಿತ ಎಲ್ಲ ಹಬ್ಬಗಳನ್ನೂ ವಿಶೇಷವಾಗಿ ಆಚರಿಸಲಾಗುತ್ತಿದೆ. ಇದಕ್ಕೆ ಸಿಬ್ಬಂದಿ ವಿದ್ಯಾರ್ಥಿಗಳ ಪಾಲಕರ, ಗ್ರಾಮಸ್ಥರ ಸಹಕಾರ ಇದೆ ಎಂದರು.

ಈ ವೇಳೆಯಲ್ಲಿ ಉತ್ತಮ ವೇಷಭೂಷಣಗಳಲ್ಲಿ ಕೃಷ್ಣ ಹಾಗೂ ರಾಧೆ, ರುಕ್ಮಿಣಿಯನ್ನ ಆಯ್ಕೆ ಮಾಡಿ ಬಹುಮಾನ ನೀಡುವುದರ ಜೊತೆ ವಿಭಾಗವಾರು ಶಿಕ್ಷಕರಿಗೂ ಬಹುಮಾನ ನೀಡಲಾಯಿತು.

ಸಂದರ್ಭದಲ್ಲಿ ಶಿಕ್ಷಕರಾದ ರೇಖಾ,ಗ ರುಸ್ವಾಮಿ,ಹನುಮಂತರಾಯಪ್ಪ,ಲತಾ,ನಂದಿನಿ ಸೇರಿದಂತೆ ಇನ್ನಿತರ ಶಿಕ್ಷಕರು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು,ಪಾಲಕರು, ಗ್ರಾಮಸ್ಥರು ಉಪಸ್ಥಿತರಿದ್ದರು.

## ಕುಕ್ಕುವಾಡೇಶ್ವರಿ ಶ್ರಾವಣ ಮಾಸದ ಪೂಜಾ ಕಾರ್ಯಕ್ರಮ

**ಚಿತ್ರದುರ್ಗ:** ಕುಕ್ಕುವಾಡೇಶ್ವರಿ ಮೇದಾರ ಬಿದಿರು ಮತ್ತು ಬೊಂಬು ಕಸುಬುದಾರರ ಕ್ಷೇಮಾಭಿವೃದ್ಧಿ ಸಂಘದಿಂದ ಪ್ರತಿ ವರ್ಷದಂತೆ ಈ ಬಾರಿಯೂ ಆ.27 ರ ಇಂದು ಬೆಳಿಗ್ಗೆ 9 ರಿಂದ ಶ್ರಾವಣ ಮಾಸದ ಪೂಜಾ ಕಾರ್ಯಕ್ರಮವನ್ನು ಚಂದ್ರವಳ್ಳಿಯಲ್ಲಿರುವ ಕುಕ್ಕುವಾಡೇಶ್ವರಿ ದೇವಸ್ಥಾನದಲ್ಲಿ ಹಮ್ಮಿಕೊಳ್ಳಲಾಗಿದೆ. ಇಮ್ಮಡಿ ಬಸವಪ್ರಭು ಮೇದಾರ ಕೇತೇಶ್ವರ ಸ್ವಾಮೀಜಿ ಸಾನಿಧ್ಯ ವಹಿಸುವರು. ಶಾಸಕ ಕೆ.ಸಿ.ವೀರೇಂದ್ರಪಪ್ಪಿ ಅಧ್ಯಕ್ಷತೆ ವಹಿಸಲಿದ್ದು, ಸಂಸದ ಗೋವಿಂದ ಕಾರಜೋಳ, ಅಖಿಲ ಕರ್ನಾಟಕ ಮೇದಾರ ಟ್ರಸ್ಟ್‌ನ ಅಧ್ಯಕ್ಷ ಸಿ.ಪಿ.ಪಾಟೀಲ್ ಇವರುಗಳು ಮುಖ್ಯ ಅತಿಥಿಯಾಗಿ ಪಾಲ್ಗೊಳ್ಳಲಿದ್ದಾರೆ.

**ಪ್ರಮುಖ ಸುದ್ದಿ**

# ಸ್ತ್ರೀ ಕುಲದ ಮೇಲೆ ದಾಳಿ ಮಾಡುವವರಿಗೆ ಕಠೋರ ಶಿಕ್ಷೆಯಾಗಲಿ





» **ಕಾರ್ಕಳ**

ಬೆಳೆ ಫಸಲು ಕೊಡುವ ಮೊದಲು ಬರುವ ಕಸವನ್ನು ಕಿತ್ತು ಬಿಸಾಕುವಂತೆ ಭಾರತೀಯ ಸಂಸ್ಕೃತಿ ಹಾಗೂ ಪೂಜ್ಯನೀಯ ಸ್ತ್ರೀ ಕುಲದ ಮೇಲೆ ದಾಳಿ ಮಾಡುವವರನ್ನು ಕಿತ್ತು ಎಸೆಯುವ ಕೆಲಸವನ್ನು ಸರಕಾರ ಮಾಡಬೇಕಾಗಿದೆ ಎಂದು ಚಿತ್ರದುರ್ಗ ಭೋವಿ ಗುರುಪೀಠದ ಜಗದ್ಗುರು ಶ್ರೀ ಇಮ್ಮಡಿ ಸಿದ್ದರಾಮೇಶ್ವರ ಸ್ವಾಮೀಜಿ ಹೇಳಿದರು.

ಕಾರ್ಕಳದಲ್ಲಿ ಭೋವಿ ಸಮುದಾಯದ ಯುವತಿಯ ಮೇಲೆ ಅನ್ಯಕೋಮಿನ ದುರುಳರು ನಡೆಸಿದ ಅತ್ಯಾಚಾರ ಖಂಡಿಸಿ, ಕರ್ನಾಟಕ ಭೋವಿ ವಡ್ಡರ ಕ್ಷೇಮಾಭಿವೃದ್ಧಿ ಸಂಘ, ದ.ಕ ಮತ್ತು ಉಡುಪಿ, ಹಿಂದೂ ಹಿತರಕ್ಷಣಾ ಸಮಿತಿ ನೇತೃತ್ವದಲ್ಲಿ ವಿಶ್ವ ಹಿಂದೂ ಪರಿಷತ್, ಬಜರಂಗದಳ, ಹಿಂದೂ ಜಾಗರಣ ವೇದಿಕೆ ಸಹಯೋಗದಲ್ಲಿ ನಡೆದ ಖಂಡನಾ ಮೆರವಣಿಗೆಯ ಬಳಿಕ ಮಂಜುನಾಥ್ ಪೈ ಸಭಾಂಗಣದಲ್ಲಿ ನಡೆದ ಬೃಹತ್ ಸಭೆ ಉದ್ದೇಶಿಸಿ ಸ್ವಾಮೀಜಿ ಮಾತನಾಡಿದರು.

ಭಾರತ ಜಗತ್ತಿನ ಸಂಸ್ಕಾರ, ಸಂಸ್ಕೃತಿಯ ರಾಯಭಾರಿ. ಇಂತಹ ಪರಂಪರೆ ಇರುವ ದೇಶದಲ್ಲಿ ಅತ್ಯಾಚಾರದ ಘಟನೆಗಳು ನಡೆಯುತ್ತಿರುವುದು ಮುಜುಗರಕ್ಕೀಡು ಮಾಡುತ್ತವೆ.

ಮನೆಯಲ್ಲಿ ಸಂಸ್ಕಾರದ ಕೊರತೆಯಿಂದಾಗಿ ಈ ರೀತಿಯ ದುಷ್ಕೃತ್ಯಗಳು ನಡೆಯುತ್ತಿವೆ. ಆಧುನಿಕ ಕಾಲದಲ್ಲಿ ಭಯ ಮಾಯೆಯಾಗಿ ಭಕ್ತಿ ಯಾಂತ್ರಿಕವಾಗಿದೆ. ಹೀಗಾಗಿ ಸಮಾಜ ದಾರಿ ತಪ್ಪುತ್ತಿದೆ. ಇಂತಹ ದುಷ್ಕೃತ್ಯಗಳ ವಿರುದ್ಧ ಸರಕಾರ ಅತ್ಯಂತ ಕಠಿಣ ಕ್ರಮಕೈಗೊಳ್ಳಬೇಕು ಎಂದು ಆಗ್ರಹಿಸಿದರು. ಜಾತಿ, ಧರ್ಮ ನೋಡದೆ ಮಾನವೀಯ ನೆಲೆಯಲ್ಲಿ ಹೆಣ್ಣು ಮಗಳ ಮೇಲಾದ ಅತ್ಯಾಚಾರದ ವಿರುದ್ಧ ಹೋರಾಡಬೇಕು ಎಂದು ಕರೆ ನೀಡಿದರು.

## ಫಾಸ್ಟ್ ನ್ಯೂಸ್

### 27ಕ್ಕೆ ಮುರುಘರಾಜೇಂದ್ರ ಮಹಾಸ್ವಾಮಿ ಹುಟ್ಟುಹಬ್ಬ

» ಚಿತ್ರದುರ್ಗ



ಚಿತ್ರದುರ್ಗ ಶೂನ್ಯ ಪೀಠದ 24ನೆಯ ಅಧ್ಯಕ್ಷರು ,ತ್ರಿವಿಧ ದಾಸೋಹ ತತ್ವದ ರೂವಾರಿ ಶ್ರೀಮನ್ಮಹಾರಾಜ ನಿರಂಜನ ಜಗದ್ಗುರು ಶ್ರೀ ಜಯದೇವ ಮುರುಘರಾಜೇಂದ್ರ ಮಹಾಸ್ವಾಮಿಗಳವರು 27.08,2024 ಕಕ್ಕೆ ಜನ್ಮ ತಾಳಿ 150 ವರ್ಷಗಳು ಸಂದುತ್ತವೆ. ಪ್ರಯುಕ್ತ ಅವರ 150ನೇ ಜಯಂತ್ಯುತ್ಸವವನ್ನು ಶರಣ ಸಂಸ್ಕೃತಿ ಉತ್ಸವ ಸಂದರ್ಭದಲ್ಲಿ ಅರ್ಥಪೂರ್ಣವಾಗಿ ಆಚರಿಸಲು ಈಗಾಗಲೇ ಮೊನ್ನೆ ನಡೆದ ಪೂರ್ವ ಸಿದ್ಧತಾ ಸಭೆಯಲ್ಲಿ ತೀರ್ಮಾನಿಸಲಾಗಿದೆ. ಇದೀಗ ದಿನಾಂಕ 27 -8 -2024ರ ಮಂಗಳವಾರ ಪರಮ ಪೂಜ್ಯ ಗುರುಗಳ ಜಯಂತಿ ಮಹೋತ್ಸವವನ್ನು ಚಿತ್ರದುರ್ಗದ ಮುರುಘಾಮಠದಲ್ಲಿ ಅಂದು ಬೆಳಗ್ಗೆ 8ಗಂಟೆಗೆ ಮುರಗಿ ಶಾಂತವೀರ ಮಹಾಸ್ವಾಮಿಗಳವರ ಕರ್ತೃ ಗದ್ದುಗೆಯ ಮುಂದೆ ಆಚರಿಸಲಾಗುವುದು. ಹಾಗೆಯೇ ಮಹಾಸ್ವಾಮಿಗಳವರ,ಬೃಹನ್ಮಠದ ಭಕ್ತರು ಅಭಿಮಾನದಿಂದ ಆಚರಿಸಲಿದ್ದಾರೆ. ಅದರಂತೆ ಬೃಹನ್ಮಠದ ಶಾಖಾ ಖಾಸಾ ಮಠಗಳಲ್ಲಿ, ವಿದ್ಯಾರ್ಥಿನಿಲಯಗಳಲ್ಲಿ,ಹಾಗೂ ಎಸ್ ಜೆ ಎಂ ವಿದ್ಯಾಪೀಠದ ಎಲ್ಲ ಶಾಲಾ ಕಾಲೇಜುಗಳಲ್ಲಿ ಅವರ ವ್ಯಕ್ತಿತ್ವ ಮತ್ತು ಸಾಧನೆ ಕುರಿತಾದ ಬಗ್ಗೆ ಚಿಂತನ ನಡೆಸಲಾಗುತ್ತದೆ ಎಂದು ಅಧ್ಯಕ್ಷರು ಹಾಗೂ ಸದಸ್ಯರು ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠ ಹಾಗೂ ಎಸ್ ಜೆ ಎಂ ವಿದ್ಯಾಪೀಠ ಆಡಳಿತ ಮಂಡಳಿಯ ಸದಸ್ಯರು ತಿಳಿಸಿದ್ದಾರೆ.

### ತಪ್ಪಿತಸ್ಥ ಅಧಿಕಾರಿಗಳ ಅಮಾನತು: ಮುಖ್ಯಮಂತ್ರಿ ಸಿದ್ದರಾಮಯ್ಯ

» ಬೆಂಗಳೂರು

ಪರಪ್ಪನ ಅಗ್ರಹಾರ ಜೈಲಿನಲ್ಲಿ ನಟ ದರ್ಶನ್ ಮತ್ತಿತರರಿಗೆ ರಾಜಾತಿಥ್ಯ ಒದಗಿಸುತ್ತಿರುವ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಪ್ಪಿತಸ್ಥ ಅಧಿಕಾರಿಗಳನ್ನು ಕೂಡಲೇ ಅಮಾನತು ಮಾಡುವಂತೆ ಸೂಚಿಸಿದ್ದಾರೆ. ದರ್ಶನ್ ಮತ್ತು ಇತರರನ್ನು ಕೂಡಲೇ ಬೇರೆ ಬೇರೆ ಕಾರಾಗೃಹಗಳಿಗೆ ಸ್ಥಳಾಂತರ ಮಾಡುವಂತೆ ಸಿಎಂ ತಾಕೀತು ಮಾಡಿದ್ದಾರೆ. ಕಾರಾಗೃಹಕ್ಕೆ ಭೇಟಿ ನೀಡಿ ಪ್ರಕರಣದ ಬಗ್ಗೆ ಸಂಪೂರ್ಣ ವರದಿ ನೀಡುವಂತೆ ಸಿಎಂ ಅವರು ರಾಜ್ಯ ಪೊಲೀಸ್ ಮಹಾ ನಿರ್ದೇಶಕರಿಗೆ ಸೂಚನೆ ನೀಡಿದ್ದಾರೆ.

### ಅಂಗನವಾಡಿ ಹುದ್ದೆಗೆ ಅರ್ಜಿ ಆಹ್ವಾನ

» ಹೊಸಪೇಟೆ

ವಿಜಯನಗರ ಜಿಲ್ಲೆಯ ಕೂಡ್ಲಿಗಿ ಶಿಶು ಅಭಿವೃದ್ಧಿ ಯೋಜನೆಯಡಿ ಕೂಡ್ಲಿಗಿ ಹಾಗೂ ಕೊಟ್ಟೂರು ತಾಲೂಕಿನ ವ್ಯಾಪ್ತಿಯ ಪಟ್ಟಣ ಪಂಚಾಯಿತಿ, ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಖಾಲಿ ಇರುವ 14 ಅಂಗನವಾಡಿ ಕಾರ್ಯಕರ್ತೆಯರು ಹಾಗೂ 56 ಅಂಗನವಾಡಿ ಸಹಾಯಕಿಯರ ಗೌರವ ಸೇವೆ ಹುದ್ದೆಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಸೆಪ್ಟಂಬರ್ 12 ಕೊನೆಯ ದಿನವಾಗಿದೆ. ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ವೆಬ್‌ಸೈಟ್ https://karnemakaone.kar.nic/abcd/ ಹಾಗೂ ಹೆಚ್ಚಿನ ಮಾಹಿತಿಗಾಗಿ ಕೂಡ್ಲಿಗಿ ತಾಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯಲ್ಲಿ ಕಚೇರಿ ಸಮಯದಲ್ಲಿ ಸಂಪರ್ಕಿಸಬಹುದು.

### ಕುಶಲಕರ್ಮಿಗಳಿಂದ ಅರ್ಜಿ ಆಹ್ವಾನ

» ಚಿತ್ರದುರ್ಗ

ಜಿಲ್ಲಾ ಉದ್ಯಮ ಕೇಂದ್ರ ಯೋಜನೆ ಹಾಗೂ ವೃತ್ತಿಪರ ಕುಶಲಕರ್ಮಿಗಳಿಗೆ ಉಚಿತ ಉಪಕರಣ ಸರಬರಾಜು ಯೋಜನೆಯಡಿ ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಸೆಪ್ಟಂಬರ್ 1 ರಿಂದ ಅರ್ಜಿ ಸಲ್ಲಿಕೆ ಪ್ರಕ್ರಿಯೆ ಪ್ರಾರಂಭವಾಗಲಿದ್ದು, ಅರ್ಜಿ ಸಲ್ಲಿಸಲು ಅಕ್ಟೋಬರ್ 31 ಕೊನೆಯ ದಿನವಾಗಿದೆ. 2024-25ನೇ ಪ್ರಸಕ್ತ ಸಾಲಿಗೆ ಜಿಲ್ಲಾ ಉದ್ಯಮ ಕೇಂದ್ರ ಯೋಜನೆಯಡಿ ಸ್ವ ಉದ್ಯೋಗ ಕೈಗೊಳ್ಳಲು ಆರ್ಥಿಕವಾಗಿ ಹಿಂದುಳಿದ ಗ್ರಾಮೀಣ ಭಾಗದ ಮಹಿಳಾ ಫಲಾನುಭವಿಗಳಿಗೆ ಪ್ರತಿ ಗ್ರಾಮ ಪಂಚಾಯತ್‌ಗೆ ಒಟ್ಟು 02 ಹೊಲಿಗೆ ಯಂತ್ರಗಳು ಹಾಗೂ ಗ್ರಾಮೀಣ ಭಾಗದ ವೃತ್ತಿ ನಿರತ ಕುಶಲಕರ್ಮಿಗಳಿಗೆ ಉಚಿತ ಉಪಕರಣ ಸರಬರಾಜು ಯೋಜನೆಯಡಿ ಪ್ರತಿ ಗ್ರಾಮ ಪಂಚಾಯತ್‌ಗೆ ಒಟ್ಟು 01 ಗಾರೆ ಮತ್ತು 01 ಧೋಭಿ ವೃತ್ತೀಯ ಸುಧಾರಿತ ಉಪಕರಣಗಳನ್ನು ಉಚಿತವಾಗಿ ವಿತರಿಸಲು ಗ್ರಾಮಾಂತರ ಕೈಗಾರಿಕೆ ಕಚೇರಿಯಿಂದ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಅರ್ಹ ಫಲಾನುಭವಿಗಳನ್ನು ಸಂಬಂಧಿಸಿದ ಗ್ರಾಮ ಪಂಚಾಯತಿಗಳ ಗ್ರಾಮ ಸಭೆಯ ಮೂಲಕ ಆಯ್ಕೆ ಮಾಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ತಮ್ಮ ವ್ಯಾಪ್ತಿಯ ಗ್ರಾಮ ಪಂಚಾಯಿತಿಗಳನ್ನು ಸಂಪರ್ಕಿಸಬಹುದು.

ಶ್ರೀಕೃಷ್ಣ ಜಯಂತಿ ಆಚರಣೆ ಸಮಾರಂಭದಲ್ಲಿ ಪ್ರೊ.ಜಿ.ಪರಮೇಶ್ವರಪ್ಪ

# ಪ್ರಪಂಚದ ಎಲ್ಲ ತತ್ವ ಕೃಷ್ಣನ ಭಗವದ್ಗೀತೆಯಲ್ಲಿವೆ


» ಚಿತ್ರದುರ್ಗ

ವ್ಯಾಸ ಭಾರತದಲ್ಲಿ ಭೀಷ್ಮನು ಸರ್ವ ಶಾಸ್ತ್ರಮಹೀ ಹೀ ಗೀತಾ ಎಂದು ಹೇಳಿದ್ದಾರೆ. ಅಂದರೆ ಪ್ರಪಂಚದ ಎಲ್ಲ ತತ್ವಗಳು ಶ್ರೀಕೃಷ್ಣನ ಭಗವದ್ಗೀತೆಯಲ್ಲಿವೆ ಎಂದು ಹೇಳಿರುವ ಭೀಷ್ಮನ ಮಾತು ಬಹಳ ಪ್ರಸಿದ್ಧವಾದುದು ಎಂದು ನಿವೃತ್ತ ಪ್ರಾಧ್ಯಾಪಕ ಪ್ರೊ.ಜಿ.ಪರಮೇಶ್ವರಪ್ಪ ಹೇಳಿದರು.

ನಗರದ ಹೊಳಲ್ಕೆರೆ ರಸ್ತೆಯ ಶ್ರೀ ಕೃಷ್ಣ ವೃತ್ತದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ವತಿಯಿಂದ ಹಮ್ಮಿಕೊಂಡಿದ್ದ ಶ್ರೀಕೃಷ್ಣ ಜಯಂತಿ ಆಚರಣೆ ಸಮಾರಂಭದಲ್ಲಿ ಅವರು ಮಾತನಾಡಿದರು.

ಶ್ರೀಕೃಷ್ಣನ ಭಗವದ್ಗೀತೆ ಬದಲಾವಣೆ, ರೂಪಾಂತರ ಪಡೆಯದೇ ಯಥಾವತ್ತಾಗಿ ಉಳಿದಿದ್ದು, ಭಗವದ್ಗೀತೆ ಬಹಳ ಶ್ರೇಷ್ಠವಾಗಿ ಜಗತ್ತಿನಲ್ಲಿ ರಾರಾಜಿಸುತ್ತಿದೆ ಎಂದು ಹೇಳಿದರು.

ಕೃಷ್ಣಜನ್ಮಾಷ್ಟಮಿನೆನೆಸಿಕೊಂಡರೆಬಹುಶಃ ಪ್ರತಿಯೊಬ್ಬರಿಗೂ ಆನಂದ ಉಂಟು ಮಾಡುವ ಸಂದರ್ಭವಾಗಿದೆ. ಶ್ರೀ ಕೃಷ್ಣ ಚರಿತ್ರೆ ಬಾಲ್ಯ, ಯೌವ್ವನ ಹಾಗೂ ಸನ್ಯಾಸತ್ವ ಸೇರಿದಂತೆ ಒಟ್ಟು ಮೂರು ಹಂತದಲ್ಲಿ ಬರುತ್ತದೆ. ಋಷಿ ಮುನಿಗಳ ಪ್ರಕಾರ ಒಬ್ಬ ಮನುಷ್ಯ ಮಹಾತ್ಮನಾಗಬೇಕಾದರೆ, ದೇವಾತ್ಮನಾಗಬೇಕಾದರೆ ಆರು ಗುಣಗಳಿರಬೇಕು. ಶ್ರೀಮಂತಿಕೆ, ಅಧಿಕಾರ, ಕೀರ್ತಿವಂತ, ಸೌಂದರ್ಯ, ದಾನಿ ಹಾಗೂ ತ್ಯಾಗಿಯಾಗಿರಬೇಕು. ಈ ಎಲ್ಲ ಗುಣಗಳು ಶ್ರೀಕೃಷ್ಣನಿಗೆ ಇದ್ದವು. ಹಾಗಾಗಿ ಕೃಷ್ಣನು ದೇವ ಪುರುಷ, ದೇವಾತ್ಮನಾದ ಎಂದು ಹೇಳಿದರು.



ಮೊಟ್ಟ ಮೊದಲಿಗೆ ಶ್ರೀಕೃಷ್ಣನ ಕಥೆಯನ್ನು ಹೇಳಿದವರು ಕನ್ನಡದ ಕವಿ ಪಂಪ. ತನ್ನ ಕಾವ್ಯದಲ್ಲಿ ಶ್ರೀಕೃಷ್ಣನ ಪಾತ್ರವನ್ನು ರಾಜಕೀಯ ಮುತ್ಸದ್ದಿಯಾಗಿ ಚಿತ್ರಣ ಮಾಡಿದ್ದಾನೆ. ಕುಮಾರವ್ಯಾಸ ಕವಿಯು ಕೃಷ್ಣನನ್ನು ಭಕ್ತನನ್ನಾಗಿ ಬಿಂಬಿಸಿರುವುದನ್ನು ಕಾಣಬಹುದಾಗಿದೆ. ಪಂಪ ಕವಿ ಅರ್ಜುನನ್ನು ಕಥಾ ನಾಯಕನನ್ನಾಗಿ ಆಯ್ಕೆ ಮಾಡಿಕೊಂಡರೆ, ಕುಮಾರವ್ಯಾಸ, ಕೃಷ್ಣನನ್ನು ತನ್ನ ಕಾವ್ಯದ ಕಥಾ ನಾಯಕನನ್ನಾಗಿ ಮಾಡಿಕೊಂಡಿದ್ದಾನೆ ಎಂದು ಹೇಳಿದರು.

ಮಹನೀಯರ ಆದರ್ಶಗಳನ್ನು ಜನರಿಗೆ ಮುಟ್ಟಿಸುವ ಸದುದ್ದೇಶದಿಂದ ಸರ್ಕಾರ ಮಹಾತ್ಮರ ಜಯಂತಿಗಳನ್ನು ಆಚರಣೆ ಮಾಡಲಾಗುತ್ತಿದೆ. ಮಹನೀಯರ ತತ್ವಾದರ್ಶಗಳಪಾಲನೆಮೂಲಕಸಮಾಜದ ಮಲಿನತೆಯನ್ನು ಸರಿ ಮಾಡುವುದೇ ಇದರ ಮುಖ್ಯ ಉದ್ದೇಶವಾಗಿದೆ ಎಂದು ಹೇಳಿದರು.

ಚಿತ್ರದುರ್ಗದ ಗ್ರೇಡ್-2 ತಹಶೀಲ್ದಾರ್ ನಾಗರಾಜ್ ಮಾತನಾಡಿ, ಸಮಾಜ, ದೇಶ ಹಾಗೂ ವಿಶ್ವಕ್ಕೆ ದಾರಿತೋರಿಸುವ ನಿಟ್ಟಿನಲ್ಲಿ ಶ್ರೀಕೃಷ್ಣ ಕೊಡುಗೆ ಅಪಾರ. ಶ್ರೀಕೃಷ್ಣನು ಭಗವದ್ಗೀತೆಯ ಮೂಲಕ ನೀಡಿದ ಸಂದೇಶಗಳು ಇಂದಿಗೂ ಪ್ರಸ್ತುತವಾಗಿದ್ದು, ಧರ್ಮ ಸ್ಥಾಪನೆಗಾಗಿ ಜನಿಸಿದ ಶ್ರೀಕೃಷ್ಣನ ಭಗವದ್ಗೀತೆ ಪ್ರತಿಯೊಬ್ಬರೂ ಓದಬೇಕು ಹಾಗೂ ಕೃಷ್ಣನ ಗೀತೋಪದೇಶಗಳನ್ನು ನಾವೆಲ್ಲರೂ ಪಾಲಿಸುತ್ತಾ ಸಮಾಜಕ್ಕೆ ಮಾದರಿಯಾಗಿ ಜೀವನ ನಡೆಸೋಣ ಎಂದು ಹೇಳಿದರು.

ಚಿತ್ರದುರ್ಗದ ಅಖಿಲ ಭಾರತ ಯಾದವ ಗುರುಪೀಠದ ಕೃಷ್ಣ ಯಾದವನಂದ ಸ್ವಾಮೀಜಿ ಅವರು ನಗರದ ಹೊಳಲ್ಕೆರೆ ರಸ್ತೆಯ ಶ್ರೀ ಕೃಷ್ಣ ಸರ್ಕಲ್‌ನಲ್ಲಿ ಶ್ರೀಕೃಷ್ಣರ ಪುತ್ಥಳಿಗೆ ಪುಷ್ಪನಮನ ಸಲ್ಲಿಸಿ ಗೌರವ ಸಮರ್ಪಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಯಾದವ ಸಂಘದ ಕಾರ್ಯದರ್ಶಿ ಬಿ.ಆನಂದ, ಯಾದವ ಸಮಾಜದ ಮುಖಂಡರಾದ ಕದಿರಣ್ಣ, ಜಾಲಿಕಟ್ಟೆ ಜಗಣ್ಣ, ಗರಡಿ ತಿಮ್ಮಣ್ಣ, ಕೃಷ್ಣಪ್ಪ ಸೇರಿದಂತೆ ಮತ್ತಿತರರು ಇದ್ದರು. ಚಿತ್ರದುರ್ಗ ತಾಲ್ಲೂಕು ಆಯಿತೋಳು ಮಾರುತೇಶ್ ಮತ್ತು ತಂಡದವರಿಂದ ಗೀತ ಗಾಯನ ನಡೆಸಿಕೊಟ್ಟರು. ರಂಗನಿರ್ದೇಶಕ ಕೆಪಿಎಂ ಗಣೇಶಯ್ಯ ನಿರೂಪಿಸಿದರು.

## ಉತ್ತಮ ಆಟಪ್ರದರ್ಶಿಸುವ ಮೂಲಕ ಕ್ರೀಡಾ ಕ್ಷೇತ್ರದ ಗೌರವವನ್ನು ಉಳಿಸಿ: ಶಾಸಕ ಟಿ.ರಘುಮೂರ್ತಿ

» ಚಳ್ಳಕೆರೆ

ಪ್ರತಿಯೊಂದು ಕ್ರೀಡೆಯಲ್ಲೂ ಕ್ರೀಡಾಪಟುಗಳು ಕ್ರೀಡಾಮನೋಭಾವದಿಂದ ಆಟವಾಡಬೇಕು. ಸೋಲು, ಗೆಲುವನ್ನು ಸಮನಾಂತರವಾಗಿ ಸ್ವೀಕರಿಸಬೇಕು. ಕ್ರೀಡೆಯಿಂದಲೂ ಉತ್ತಮ ಬದುಕು ರೂಪಿಸಿಕೊಳ್ಳಬಹುದು ಎಂದು ಕ್ಷೇತ್ರದ ಶಾಸಕ, ಕರ್ನಾಟಕ ರಾಜ್ಯ ಸಣ್ಣಕೈಗಾರಿಕೆ ಅಭಿವೃದ್ದಿ ಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.



ಅವರು, ಸೋಮವಾರ ನಗರದ ಬಿಎಂ ಸರ್ಕಾರಿ ಪ್ರೌಢಶಾಲಾ ಮೈದಾನದಲ್ಲಿ ಶಿಕ್ಷಣ ಇಲಾಖೆ ಹಮ್ಮಿಕೊಂಡಿದ್ದ ತಾಲ್ಲೂಕು ಮಟ್ಟದ ವಲಯ, ಹೋಬಳಿ ಕ್ರೀಡಾಕೂಟವನ್ನು ಉದ್ಘಾಟಿಸಿ ಮಾತನಾಡಿದರಲ್ಲದೆ, ಕ್ರೀಡಾಜ್ಯೋತಿಯನ್ನು ಸ್ವೀಕರಿಸಿ ಕ್ರೀಡಾಪಟುಗಳಿಗೆ ಶುಭಹಾರೈಸಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್, ತಾಲ್ಲೂಕಿನಾದ್ಯಂತ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಿಗೆ ಪ್ರತಿವರ್ಷವೂ ಕ್ರೀಡಾಪಟುಗಳ ಸಂಖ್ಯೆ ಹೆಚ್ಚುತ್ತಿದೆ. ಆದ್ದರಿಂದ ಪರಶುರಾಮಪುರ, ಚಳ್ಳಕೆರೆ ಗ್ರಾಮಾಂತರ, ಕಸಬಾ ಹೀಗೆ ವಿವಿಧ ವಿಭಾಗಗಳಲ್ಲಿ ಕ್ರೀಡಾಪಟುಗಳನ್ನು ಗುರುತಿಸಿ ಅವರಿಗೆ ಅವಕಾಶ ಮಾಡಿಕೊಡಲಾಗುತ್ತಿದೆ. ಕ್ರೀಡೆಯಲ್ಲಿ ಚಳ್ಳಕೆರೆ ತಾಲ್ಲೂಕು ಮತ್ತೊಮ್ಮೆ ಖ್ಯಾತಿಯಾಗಲಿ ಎಂದು ಶುಭಹಾರೈಸುವುದಾಗಿ ತಿಳಿಸಿದರು. ಕಾರ್ಯಕ್ರಮದಲ್ಲಿ ಪೌರಾಯುಕ್ತ ಜಗರೆಡ್ಡಿ, ನಗರಸಭಾ ಸದಸ್ಯರಾದ ಎಂ.ಸಾವಿತ್ರಮ್ಮ, ರಮೇಶ್‌ಗೌಡ, ರಾಘವೇಂದ್ರ, ಕೆ.ವೀರಭದ್ರಪ್ಪ, ಶಶಿಧರ, ಕನ್ನಡ ಸಾಹಿತ್ಯ ಪರಿಷತ್ ತಾಲ್ಲೂಕು ಅಧ್ಯಕ್ಷ ಜಿ.ಟಿ.ವೀರಭದ್ರಸ್ವಾಮಿ, ಮುಖಂಡರಾದ ಪ್ರಹ್ಲಾದ್, ವೀರೇಶ್, ಎಂ.ಕುಮಾರಸ್ವಾಮಿ, ತಾಲ್ಲೂಕು ದೈಹಿಕ ಶಿಕ್ಷಣ ನಿರ್ದೇಶಕ ಸುನೀಲ್‌ನಾಯ್ಕ, ದೈಹಿಕಶಿಕ್ಷಕರಸಂಘಗೌರವಾಧ್ಯಕ್ಷ ಕೆ.ಟಿ.ವೇಲೂರು, ತಾಲ್ಲೂಕು ಅಧ್ಯಕ್ಷ ಸಿದ್ದಲಿಂಗಪ್ಪ, ಕಾರ್ಯದರ್ಶಿ ಎಸ್.ಶ್ರೀರಾಮನಾಯಕ, ಉಪಾಧ್ಯಕ್ಷ ಶ್ರೀನಿವಾಸ್, ಉಮೇಶ್, ಖಜಾಂಚಿ ಮರವಾಯಿಶ್ರೀನಿವಾಸ್, ಸದಸ್ಯರಾದ ಓಬಣ್ಣ, ತಿಪ್ಪೇರುದ್ರನಾಯಕ, ಶಿವಕುಮಾರ್ ಮುಂತಾದವರು ಉಪಸ್ಥಿತರಿದ್ದರು.

## ಪರಶುರಾಂಪುರ: ರೈತ ಫಲಾನುಭವಿಗಳಿಗೆ ಹಸು-ಎಮ್ಮೆ ವಿತರಣೆ


» ಪರಶುರಾಂಪುರ

ರೈತರ ಬದಕನ್ನ ಹಸನುಗೊಳಿಸಲು ವಿವಿಧ ಇಲಾಖೆಗಳ ಸಹಭಾಗಿತ್ವದಲ್ಲಿ ನೀಡುವ ಯೋಜನೆಗಳನ್ನ ಸದುಪಯೋಗ ಪಡೆದು ರೈತರು ಸಮಾಜಮುಖಿಗೆ ಬರುವಂತೆ ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಸಮೀಪದ ನಾಗಗೊಂಡನಹಳ್ಳಿ ಗ್ರಾಮದಲ್ಲಿ ರಾಷ್ಟೀಯಸುಸ್ಥಿರಕೃಷಿಅಭಿಯಾನ-ಮಳೆಯಾಶ್ರಿತ ಕೃಷಿ ಅಭಿವೃದ್ಧಿ ಯೋಜನೆಯಡಿಯಲ್ಲಿ ಆಯೋಜಿಸಿದ್ಧಾ ರೈತ ಫಲಾನುಭವಿಗಳಿಗೆ ಹಸು-ಎಮ್ಮೆ ವಿತರಣೆ ಹಾಗೂ ಸಮಗ್ರ ಕೃಷಿ ಪದ್ಧತಿ ಬಗ್ಗೆ ತರಬೇತಿ ಕಾರ್ಯಕ್ರಮದಲ್ಲಿ ಉದ್ಘಾಟಿಸಿ ಮಾತನಾಡಿದರು.ಸರಕಾರದ ಯೋಜನೆಗಳನ್ನ ಪಡೆದು ಸುಮ್ಮನಾಗದೇ ನಿರಂತರ ಪರಿಶ್ರಮದ ಮೂಲಕ ಸದುಪಯೋಗ ಪಡೆದಾಗ ಮಾತ್ರ ಯಶಸ್ಸು ಸಾಧ್ಯ.ಪದೇ ಪದೇ ಬರಗಾಲಕ್ಕೆ ತುತ್ತಾಗುವ ಜಿಲ್ಲೆಗಳಲ್ಲಿ ಚಿತ್ರದುರ್ಗ ಒಂದರಲ್ಲಿ ಅತಿ ಹೆಚ್ಚು ಕಡಿಮೆ ಬೀಳುವ ಪ್ರದೇಶ ಚಳ್ಳಕೆರೆಯಾಗಿದೆ ಇಲ್ಲಿ ನಮ್ಮ ಜವಬ್ದಾರಿಗಳ ಪ್ರಯತ್ನ ಇದ್ದಾಗ ಅಭಿವೃದ್ಧಿ ಸಾಧಿಸಲು ಸಹಕಾರಿ ಎಂದರು.



## ಪತ್ರಕರ್ತರು ವೃತ್ತಿ ಮೌಲ್ಯಗಳನ್ನು ಕಾಪಾಡಿಕೊಳ್ಳುವಲ್ಲಿ ವಿಫಲ: ನಾಗಣ್ಣ



» ಚಳ್ಳಕೆರೆ

ಆಧುನಿಕತೆ ಬೆಳೆದಂತೆ ಪತ್ರಿಕೆ ಓದುವವರ ಸಂಖ್ಯೆ ಕ್ಷೀಣಿಸುತ್ತಿರುವುದು ಆತಂಕಕಾರಿ ಎಂದು ಪ್ರಜಾಪ್ರಗತಿ ಪತ್ರಿಕೆ ಹಿರಿಯ ಸಂಪಾದಕ ಎಸ್.ನಾಗಣ್ಣ ಹೇಳಿದರು. ಅವರು ಸೋಮವಾರ ತಾಲೂಕಿನ ನಾಯಕನಹಟ್ಟಿ ಶ್ರೀಗುರುತಿಪ್ಪೇರುದ್ರಸ್ವಾಮಿ ದರ್ಶನ ಪಡೆದು ಮಾತನಾಡಿದರು. ಅತೀವ ಸಂಕಷ್ಟದಲ್ಲಿ ಮಾಧ್ಯಮ ಕ್ಷೇತ್ರ ನಡೆಯುತ್ತಿದೆ. ಓದುಗರ ವಿಶ್ವಾಸ ಮೂಡುವಂತಹ ವರದಿ ಪ್ರಕಟಗೊಳ್ಳಲಿ, ಉತ್ತಮ ಬರಹಗಳು ಹೆಚ್ಚು ಮೂಡಿಬರಲಿ, ಯುವ ಬರಹಗಾರರು ನೈಜವರದಿಗೆ ಬೆಳಕು ಚೆಲ್ಲುವತ್ತ ಮುನ್ನಡೆಯಬೇಕು. ಸಾಮಾಜಿಕ ಜಾಲತಾಣದಲ್ಲಿ ಪ್ರಸಾರವಾಗುವ ಸುದ್ದಿಗಳು ಸತ್ಯವೋ, ಸುಳ್ಳು ಎಂದು ಪರಾಮರ್ಶಿಸುವುದು ಕಬ್ಬಿಣದ ಕಡಲೆ ಆಗುತ್ತಿದೆ. ವರದಿಗಾರರು ಸತ್ಯಸುದ್ದಿಗೆ ಹೆಚ್ಚಿನ ಒತ್ತು ನೀಡುವುದರಿಂದ ಮುದ್ರಣ ಮಾಧ್ಯಮ ಇನ್ನಷ್ಟು ಗಟ್ಟಿಗೆಣಟಿಜಜಜಿಟಿಜಜಳ್ಳಿಸಬೇಕು ಹಾಗೂ ಸತ್ಯಕ್ಕೆ ಹತ್ತಿರವಾಗಬೇಕು. ಒಂದು ಸುಳ್ಳು ಸುದ್ದಿ ಸಮಾಜದ ಮೇಲೆ ಗಾಢ ಪರಿಣಾಮ ಬೀರುತ್ತದೆ. ಆದ್ದರಿಂದ, ಒಂದು ವಿಷಯವನ್ನು ವರದಿ ಮಾಡುವ ಮುನ್ನ ಎಚ್ಚರ ವಹಿಸಬೇಕು ಹಾಗೂ ಸತ್ಯಾಸತ್ಯತೆಯನ್ನು ಅರಿತು ಬರೆಯಬೇಕೆಂದು ಕಿವಿಮಾತು ಹೇಳಿದರು.

ಪತ್ರಿಕಾ ರಂಗ ಸಂವಿಧಾನದ ಮೂಲಭೂತ ಹಕ್ಕುಗಳಲ್ಲಿ ಒಂದಾದರೂ ವಾಕ್ ಸ್ವಾತಂತ್ರ್ಯದ ವಿಧಿಯಡಿ ಕಾರ್ಯನಿರ್ವಹಿಸುತ್ತದೆ. ಹಾಗೆಂದು ಬೇಕಾದನ್ನ ಬರೆಯಲು ಸಾಧ್ಯವಿಲ್ಲ. ಅದು ನಿರ್ಬಂಧನೆಗಳನ್ನು ಒಳ[illegible]ಂಡಿದೆ. ಪತ್ರಿಕಾ ರಂಗ ಇರುವುದು ಹಣ ಗಳಿಸಲು ಅಲ್ಲ. ಜನರ ಸೇವೆಗೆ ಎಂಬ ಮಹಾತ್ಮ ಗಾಂಧೀಜಿ ಹೇಳಿಕೆ ಅಕ್ಷರಶಃ ಸತ್ಯ ಎಂಬುದು ತಿಳಿದುಕೊಳ್ಳಿ ಎಂದರು.

ಈ ಸಂದರ್ಭದಲ್ಲಿ ದೇವಸ್ಥಾನ ಆಡಳಿತಾಧಿಕಾರಿ ಎಚ್.ಗಂಗಾಧರ, ಸತೀಶ್, ಶಾರದನಾಗಣ್ಣ, ಪತ್ರಕರ್ತರಾದ ಮಂಜುನಾಥ, ಹರೀಶ್, ವೀರೇಶ್, ಶಿವಮೂರ್ತಿ ಮುಂತಾದವರು ಇದ್ದರು.

ಪ್ರಮುಖ ಸುದ್ದಿ

# ತಾತ್ಸಾರ ದೂರವಿಡಿ, ಸಮಾಜದ ಸಂಘಟನೆಗೆ ಮುಂದಾಗಿ

» ದಾವಣಗೆರೆ

ಮಡಿವಾಳ ಸಮುದಾಯವು ಸಂಘಟನೆಯಲ್ಲಿ ಹಿಂದೆ ಉಳಿಯಲು ಹೋರಾಟದ ಮನೋಭಾವ ಕಡಿಮೆ ಇರುವುದು ಸಹ ಒಂದು ಕಾರಣ ಎಂದು ಚಿತ್ರದುರ್ಗದ ಮಾಚಿದೇವ ಮಹಾಮಠದ ಶ್ರೀ ಬಸವ ಮಾಚಿದೇವ ಸ್ವಾಮೀಜಿ ತಿಳಿಸಿದರು.

ಸೋಮವಾರ ವಿನೋಬ ನಗರದ ಶ್ರೀ ಮಾಚಿದೇವ ಸಮುದಾಯ ಭವನದಲ್ಲಿ ನಡೆದ ಶ್ರೀ ಮಡಿವಾಳ ಮಾಚಿದೇವರ ಶ್ರಾವಣ ಮಾಸದ ಸ್ಮರಣೋತ್ಸವ ಕಾರ್ಯಕ್ರಮ ಮತ್ತು ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ ಮಾತನಾಡಿದರು.



ಹಸಿವು ಮತ್ತು ಅವಮಾನಕ್ಕೆ ಒಳಗಾದವರು ಹೋರಾಟದಿಂದ ಸಮಾಜದಲ್ಲಿ ಉತ್ತಮ ಸ್ಥಾನಕ್ಕೇರಿರುವುದು ಕಾಣಬಹುದು. ಆದರೆ ನಮ್ಮ ಸಮುದಾಯದಲ್ಲಿ ಯಾರೂ ಕೂಡ ಸಮಾಜದ ಬಗ್ಗೆ ಅಭಿಮಾನ ಇಟ್ಟುಕೊಳ್ಳದೆ ಸಂಘಟಿತರಾಗದ ಕಾರಣ ಯಾವುದೇ ಪಕ್ಷಗಳಾಗಲೀ, ಸರ್ಕಾರಗಳಾಗಲೀ ನಮ್ಮನ್ನು ಗುರುತಿಸಲು ಮುಂದಾಗುತ್ತಿಲ್ಲ ಎಂದರು.

ಸಮುದಾಯದ ಮೇಲಿನ ನಿರಾಸಕ್ತಿ, ತಾತ್ಸಾರ ದೂರವಿಟ್ಟು ಸಮಾಜದ ಕೆಲಸ ಮಾಡಬೇಕು. ಸಮಾಜದ ಮುಂದಿನ ಪ್ರಜೆಗಳು ಈ ಹಂತವನ್ನು ಪರಿಪಕ್ವತೆಯಿಂದ ಮುನ್ನಡೆಸಿದಲ್ಲಿ ನಿರೀಕ್ಷಿತ ಸಾಧನೆ ಮಾಡಲು ಸಾಧ್ಯ. ಸಮುದಾಯದ ಅಭಿವೃದ್ಧಿಗೆ ದುಡಿಯಬೇಕು. ನಾವೆಲ್ಲರೂ ಸೇರಿ ಸಮುದಾಯದ ಅಭಿವೃದ್ಧಿ ಮಾಡೋಣ ಎಂದು ತಿಳಿಸಿದರು.

ಯಾವ ಮೀಸಲಾತಿ ಬಂದರೂ ನಮ್ಮ ಗುರಿಯ ಸಾಧನೆ ಮಾಡಬೇಕು. ಮೀಸಲಾತಿ ಬಂದರೆ ಸಾಕಷ್ಟು ಲಾಭ ಇದೆ. ಸರ್ಕಾರ ಸಹ ಸಣ್ಣ ಸಮುದಾಯದತ್ತ ಹೆಚ್ಚು ಗಮನ ನೀಡಬೇಕು. ಅದಕ್ಕಾಗಿ ಮಡಿವಾಳ ಸಮುದಾಯವು ಹೆಚ್ಚು ಹೆಚ್ಚು ಸಂಘಟಿತರಾಗುವ ಮೂಲಕ ಸರ್ಕಾರಗಳಿಗೆ, ರಾಜಕೀಯ ಪಕ್ಷಗಳಿಗೆ ನಮ್ಮ ಒಗ್ಗಟ್ಟು ಪ್ರದರ್ಶನ ಮಾಡಬೇಕು ಎಂದು ತಿಳಿಸಿದರು.

ಸಮಾಜದಲ್ಲಿ ಅನೇಕ ದಾರ್ಶನಿಕರು ತಮ್ಮನ್ನು ತಾವು ಸುಟ್ಟುಕೊಂಡು ಜಗತ್ತಿಗೆ ಬೆಳಕು ನೀಡಿದವರು. ಮಡಿವಾಳ ಮಾಚಿದೇವರು ನಮ್ಮ ಕುಲದ ತಿಲಕರು. ಅವರಿಂದ ಸಮಾಜಕ್ಕೆ ಹೆಸರು ಬಂದಿದೆ. ಹಣ ಗಳಿಸುವ ಜೊತೆಗೆ ಜ್ಞಾನದ ಶಕ್ತಿ ನೀಡಿರುವ ಕಾರಣಕ್ಕೆ ಅವರು ಸದಾ ಪ್ರಾತಃಸ್ಮರಣೀಯರು ಎಂದು ಬಣ್ಣಿಸಿದರು.

ಶ್ರೀ ಮಡಿವಾಳ ಮಾಚಿದೇವರು ನಮ್ಮ ಕುಲದ ಉದ್ಧಾರಕ. ಹೀಗಾಗಿ ಪೂಜಿಸಬೇಕು. ಅವರು ಸಮಾಜಕ್ಕೆ ನೀಡಿರುವ ಪ್ರತಿಯೊಂದು ವಚನದಲ್ಲಿ ಜೀವನದ ಅನುಭವ ಮತ್ತು ಮಾರ್ಗದರ್ಶನ ಇದೆ. ಹಾಗಾಗಿಯೇ ವಚನಗಳ ಸಾರವನ್ನು ಜೀವನದಲ್ಲಿ ಅಳವಡಿಸಿಕೊಳ್ಳುವುದು ಮಾತ್ರವಲ್ಲ ಸಾಗಬೇಕು ಎಂದು ತಿಳಿಸಿದರು.

ಬಸವಾದಿ ಶರಣರು ಕಾಯಕ ಮತ್ತು ದಾಸೋಹ, ಧ್ಯಾನ, ಶಿವಯೋಗ ಮಾಡು ಎಂದು ತಿಳಿಸಿದವರು. ಸಂಸ್ಕಾರದಲ್ಲಿ ಬದುಕುವ ಕೆಲಸವನ್ನು ಮುಖ್ಯವಾಗಿ ಮಡಿವಾಳ ಮಾಚಿದೇವರು ಮಾಡಿದವರು ಎಂದು ತಿಳಿಸಿದರು.

ಸಮಾಜದ ಕಾರ್ಯಾಧ್ಯಕ್ಷ ಆವರಗೆರೆ ಎಚ್.ಜಿ.ಉಮೇಶ್ ಮಾತನಾಡಿ, ಮಡಿವಾಳ ಸಮಾಜದ ಮಕ್ಕಳು ಯಾರೂ ಕೂಡಾ ಉನ್ನತ ಶಿಕ್ಷಣ ಪಡೆಯಲು ಆಗಿಲ್ಲ. ಬಹಳಷ್ಟು ಜನರು ಶೈಕ್ಷಣಿಕವಾಗಿ ಹಿಂದುಳಿದಿದ್ದಾರೆ. ಉನ್ನತ ಶಿಕ್ಷಣ, ಹುದ್ದೆಗೇರಲು ಅನುಕೂಲ ಆಗುವಂತೆ ಪರಿಶಿಷ್ಟ ಜಾತಿ ಪಟ್ಟಿಗೆ ಸೇರಿಸಬೇಕು ಎಂದು ಹೋರಾಟ ಮಾಡುತ್ತಿದ್ದೇವೆ ಎಂದು ತಿಳಿಸಿದರು.

ಸಮಾಜದ ಮಕ್ಕಳು ಓದಿನ ಕಡೆಗೆ ಹೆಚ್ಚು ಗಮನ ನೀಡಬೇಕು. ಉತ್ತಮ ಶಿಕ್ಷಣ ಪಡೆದಲ್ಲಿ ಎಲ್ಲೆಡೆ ಉತ್ತಮ ಸ್ಥಾನಮಾನ ದೊರೆಯುತ್ತದೆ. ವಿಶೇಷವಾಗಿ ಮಕ್ಕಳು ಮೊಬೈಲ್ ದಾಸ್ಯದಿಂದ ಹೊರ ಬರಬೇಕು. ಮನೆಯಿಂದ ಶಾಲೆ, ಕಾಲೇಜು ಹೋಗುವವ ರೆಗೂ ಮೊಬೈಲ್ ನಲ್ಲೇ ಮುಳುಗಿ ಹೋಗುವುದು ಕಂಡು ಬರುತ್ತದೆ. ಗೆಳೆಯರ ಬಗ್ಗೆ ಹೆಚ್ಚು ಜಾಗೃತಿ ವಹಿಸಬೇಕು. ತಂದೆ ತಾಯಂದಿರು ಸಹ ಮಕ್ಕಳ ಅಭ್ಯಾಸದ ಬಗ್ಗೆ ಗಮನ ಹರಿಸಬೇಕು ಎಂದು ತಿಳಿಸಿದರು.

ಸಮಾಜದಲ್ಲಿ ಗುರುತಿಸಿಕೊಳ್ಳುವಂತೆ ಜೀವನ ರೂಪಿಸಿಕೊಳ್ಳಬೇಕು. ರಾಜಕೀಯದಲ್ಲೂ ಬದ್ಧತೆಯೊಂದಿಗೆ ಮುಂದುವರಿಯಬೇಕು. ಸಮಾಜ ಬಾಂಧವರು ಹೊಂದಾಣಿಕೆಯಿಂದ ಇರಬೇಕು. ನಾವು ಗೆದ್ದಂತೆ ಸಮಾಜ ಗೆದ್ದಂತೆ ಎಂಬ ಮನೋಭಾವ ಹೊಂದಿರಬೇಕು ಎಂದು ತಿಳಿಸಿದರು.

ಮೂಡಬಿದಿರೆಯ ಶ್ರೀ ಕ್ಷೇತ್ರ ಕರಿಂಜೆಯ ಶ್ರೀ ಮುಕ್ತಾನಂದ ಸ್ವಾಮೀಜಿ ಸಾನಿಧ್ಯ, ದಾವಣಗೆರೆ ಜಿಲ್ಲಾ ಶ್ರೀ ಮಡಿವಾಳ ಮಾಚಿದೇವ ಸಂಘದ ಜಿಲ್ಲಾಧ್ಯಕ್ಷ ಎಂ.ನಾಗೇಂದ್ರಪ್ಪ ಅಧ್ಯಕ್ಷತೆ ವಹಿಸಿದ್ದರು. ಸಂಘದ ಪ್ರಧಾನ ಕಾರ್ಯದರ್ಶಿ ಓಂಕಾರಪ್ಪ, ಮಹಾನಗರ ಪಾಲಿಕೆ ವಿರೋಧ ಪಕ್ಷದ ನಾಯಕ ಕೆ.ಪ್ರಸನ್ನ ಕುಮಾರ್, ಆರ್.ಎನ್.ಧನಂಜಯ, ಸುರೇಶ್ ಕೋಗುಂಡೆ, ಅಂಜಿನಪ್ಪ ಪೂಜಾರ್, ಎಂ.ಎನ್. ಬಸವರಾಜಪ್ಪ, ವಾಣಿಜ್ಯ ತೆರಿಗೆ ಇಲಾಖೆ ಜಂಟಿ ಆಯುಕ್ತ ಎಸ್. ಮಹಂತೇಶ್ ಇತರರು ಇದ್ದರು.

